ಸಂಪುಟ : 11 ಸಂಚಿಕೆ: 72 ಪುಟ : 4+2 ಬೆಲೆ: 3.00 ಶನಿವಾರ ಎಪ್ರಿಲ್ 18 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 72 Pages : 4+2 Price : 3.00 Saturday April 18 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಮಿಲಿಟರಿ ಬಾಲಕಿಯರ ವಸತಿ ನಿಲಯ ಪ್ರವೇಶಕ್ಕೆ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಧಾರವಾಡ ನಗರದ ಸಪ್ತಾಪೂರ ರಸ್ತೆಯಲ್ಲಿರುವ ಮಿಲಿಟರಿ ಬಾಲಕಿಯರ ವಸತಿ ನಿಲಯದಲ್ಲಿ 2026–27ನೇ ಶೈಕ್ಷಣಿಕ ವರ್ಷದ ಪ್ರವೇಶಕ್ಕಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಧಾರವಾಡ, ಗದಗ, ಹಾವೇರಿ ಮತ್ತು ಬಳ್ಳಾರಿ ಜಿಲ್ಲೆಗಳ ಗ್ರಾಮಾಂತರ ಪ್ರದೇಶದ ವಿದ್ಯಾರ್ಥಿನಿಯರ ಜೊತೆಗೆ, ರಾಜ್ಯದ ಇತರ ಜಿಲ್ಲೆಗಳ ಯುದ್ಧದಲ್ಲಿ ಮಡಿದ ಯೋಧರು ಹಾಗೂ ಮಾಜಿ ಸೈನಿಕರ ಪುತ್ರಿಯರು ಅರ್ಜಿ ಸಲ್ಲಿಸಲು ಅರ್ಹರಾಗಿದ್ದಾರೆ. ಈ ವಸತಿ ನಿಲಯದಲ್ಲಿ 5ನೇ ತರಗತಿಯಿಂದ ಪಿಯುಸಿ ದ್ವಿತೀಯ ವರ್ಷದವರೆಗೆ ಓದುತ್ತಿರುವ ವಿದ್ಯಾರ್ಥಿನಿಯರಿಗೆ ಪ್ರವೇಶ ನೀಡಲಾಗುತ್ತದೆ.

ವಸತಿ ನಿಲಯದಲ್ಲಿ ವಾಸ್ತವ್ಯ ಹಾಗೂ ಊಟೋಪಚಾರ ಉಚಿತವಾಗಿ ಒದಗಿಸಲಾಗುತ್ತಿದ್ದು, ಧಾರವಾಡ ನಗರದಲ್ಲಿರುವ ಶಿಕ್ಷಣ ಸಂಸ್ಥೆಗಳಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿನಿಯರಿಗೆ ಮಾತ್ರ ವಸತಿ ಸೌಲಭ್ಯ ಲಭ್ಯವಾಗುತ್ತದೆ.

ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಜಂಟಿ ನಿರ್ದೇಶಕರು, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಉದಯ ಹಾಸ್ಟೇಲ್ ಸರ್ಕಲ್, ಸೈನಿಕ ವಿಶ್ರಾಂತಿ ಗೃಹ ಆವರಣ, ಧಾರವಾಡ ಇವರನ್ನು ಸಂಪರ್ಕಿಸಬಹುದು. ದೂರವಾಣಿ ಸಂಖ್ಯೆ: 0836–2440176. ಭರ್ತಿ ಮಾಡಿದ ಅರ್ಜಿಗಳನ್ನು ಮೇ 5ರೊಳಗಾಗಿ ಸಲ್ಲಿಸುವಂತೆ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಮುಂಗಾರು ಹಂಗಾಮಿಗೆ ಸಿದ್ಧತೆ ಅಗತ್ಯ

■ ವಿಜಯಸಾಕ್ಷಿ ಸುದ್ದಿ, ಗದಗ

ಮುಂಗಾರು ಹಂಗಾಮಿನ ಬೆಳೆಗಳಿಗೆ ಭೂಮಿ ಸಿದ್ಧಪಡಿಸುವ ಕಾರ್ಯವನ್ನು ಜಿಲ್ಲೆಯ ಎಲ್ಲಾ ರೈತರು ತಕ್ಷಣ ಕೈಗೊಳ್ಳಬೇಕು ಎಂದು ಕೃಷಿ ಇಲಾಖೆ ತಿಳಿಸಿದೆ. ಮಳೆ ಆಧಾರಿತ ಹಂಗಾಮಾಗಿರುವುದರಿಂದ ಸಮಯಕ್ಕೆ ಸರಿಯಾದ ಸಿದ್ಧತೆ ಅತ್ಯಂತ ಮುಖ್ಯವಾಗಿದೆ.

ರೈತರು ತಮ್ಮ ಜಮೀನಿನ ಮಣ್ಣಿನ ಪರೀಕ್ಷೆ ಮಾಡಿಸಿ, ಪೋಷಕಾಂಶಗಳ ಪ್ರಮಾಣವನ್ನು ತಿಳಿದುಕೊಂಡು ಅದರ ಆಧಾರದ ಮೇಲೆ ಗೊಬ್ಬರ ಬಳಕೆ ಮಾಡಬೇಕು. ಮಣ್ಣಿನ ಶಕ್ತಿಯನ್ನು ಹೆಚ್ಚಿಸಲು ಸಾವಯವ ಗೊಬ್ಬರಗಳನ್ನು ಬಳಕೆ ಮಾಡುವುದರಿಂದ ಮಣ್ಣಿನಲ್ಲಿನ ಸೂಕ್ಷ್ಮಾಣುಜೀವಿಗಳ ಸಂಖ್ಯೆ ಹೆಚ್ಚಾಗಿ, ರಸಗೊಬ್ಬರ ಬಳಕೆಯನ್ನು ಕಡಿಮೆ ಮಾಡಬಹುದಾಗಿದೆ.

ಸ್ಥಳೀಯ ಹವಾಮಾನಕ್ಕೆ ಹೊಂದುವ ಬೆಳೆ ಹಾಗೂ ತಳಿಗಳನ್ನು ಆಯ್ಕೆ ಮಾಡುವುದು ಅತ್ಯಗತ್ಯ. ಪ್ರಮಾಣಿತ ಮತ್ತು ಶಿಫಾರಸು ಮಾಡಿದ ಬೀಜಗಳನ್ನು ಮಾತ್ರ ಬಳಸಬೇಕು. ಬೀಜೋಪಚಾರ ಮಾಡಿದ ಬೀಜಗಳನ್ನು ಬಳಸುವುದರಿಂದ ಆರಂಭಿಕ ಹಂತದಲ್ಲೇ ಕೀಟ ಹಾಗೂ ರೋಗ ನಿಯಂತ್ರಣ ಸಾಧ್ಯವಾಗುತ್ತದೆ.


ಕೃಷಿ ಯಂತ್ರೋಪಕರಣಗಳನ್ನು ಮುಂಚಿತವಾಗಿ ದುರಸ್ತಿಗೊಳಿಸಿ ಸಜ್ಜಾಗಿಡಬೇಕು. ಕೃಷಿ ಇಲಾಖೆ ಹಾಗೂ ಕೃಷಿ ವಿಜ್ಞಾನ ಕೇಂದ್ರಗಳು ನಡೆಸುವ ತರಬೇತಿ ಮತ್ತು ಮುಂಗಾರು ಪೂರ್ವ ಅಭಿಯಾನಗಳಲ್ಲಿ ಭಾಗವಹಿಸಲು ರೈತರಿಗೆ ಮನವಿ ಮಾಡಲಾಗಿದೆ.

ಮಣ್ಣಿನ ಸವಕಳಿ ತಪ್ಪಿಸಲು ಇಳಿಜಾರಿನ ವಿರುದ್ಧ ಬದು ನಿರ್ಮಾಣ ಮಾಡಬೇಕು. ನೀರಿನ ಸಂಗ್ರಹ ಹೆಚ್ಚಿಸಲು ರೆಂಟೆ ಹೊಡೆದು ಅಥವಾ ಚೌಕು ಮಡಿಗಳನ್ನು ಮಾಡುವುದು ಸೂಕ್ತವಾಗಿದೆ. ಇದರಿಂದ ತೇವಾಂಶ ಉಳಿದು, ಬೆಳೆ ಉತ್ಪಾದನೆ ಹೆಚ್ಚುತ್ತದೆ.

ಹಿಂದಿನ ಹಂಗಾಮಿನ ಬೆಳೆ ಅವಶೇಷಗಳನ್ನು ಸುಡದೇ, ಕಂಪೋಸ್ಟ್ ಅಥವಾ ಎರೆಹುಳು ಗೊಬ್ಬರ ತಯಾರಿಸಲು ಬಳಸಬೇಕು. ಎರೆಹುಳು ತೊಟ್ಟಿಯಲ್ಲಿ ಕನಿಷ್ಠ 75% ತೇವಾಂಶವನ್ನು ಕಾಪಾಡಿಕೊಳ್ಳಬೇಕು ಎಂದು ಗದಗ ಜಿಲ್ಲಾ ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### "ನಾಲ್ಕನೇ ಬಾರಿ ಗೆಲುವು, ಈಗ ಮಂತ್ರಿ ಟಾರ್ಗೆಟ್ – ಜಿ.ಎಸ್. ಪಾಟೀಲರ ದೆಹಲಿ ಸ್ಟ್ರಾಟಜಿ!"

# ಈ ಬಾರಿ ಮಂತ್ರಿ ಪದವಿ ಖಚಿತವೇ?



■ ವಿಜಯಸಾಕ್ಷಿ ಸುದ್ದಿ, ಡಂಬಳ/ರೋಣ

ರಾಜ್ಯ ರಾಜಕೀಯದಲ್ಲಿ ಸಚಿವ ಸಂಪುಟ ಪುನರ್‌ರಚನೆ ಚರ್ಚೆಗಳು ತೀವ್ರಗೊಂಡಿರುವ ಹಿನ್ನೆಲೆಯಲ್ಲಿ, ರೋಣ ವಿಧಾನಸಭಾ ಕ್ಷೇತ್ರದ ಶಾಸಕ ಜಿ.ಎಸ್. ಪಾಟೀಲರು ದೆಹಲಿಯಲ್ಲಿ ಬೀಡುಬಿಟ್ಟು ಸಚಿವ ಸ್ಥಾನಕ್ಕಾಗಿ ತೆರೆಮರೆಯಲ್ಲಿ ಕಸರತ್ತು ನಡೆಸುತ್ತಿರುವುದು ರಾಜಕೀಯ ವಲಯದಲ್ಲಿ ಚರ್ಚೆಗೆ ಗ್ರಾಸವಾಗಿದೆ.

ರಾಜ್ಯದಲ್ಲಿ ಸುಮಾರು 25 ಸಚಿವರನ್ನು ಬದಲಾಯಿಸುವ ಸುಳಿವು ಕೇಳಿ ಬರುತ್ತಿರುವ ಸಮಯದಲ್ಲಿ, ಹಲವು ಸಚಿವಾಕಾಂಕ್ಷಿಗಳು ಹೈಕಮಾಂಡ್ ಮೆಟ್ಟಿಲೇರಿದ್ದು, ಅವರಲ್ಲೇ ಪ್ರಮುಖರಾಗಿ ರೋಣ ಶಾಸಕ ಜಿ.ಎಸ್. ಪಾಟೀಲರು ಕಾಣಿಸಿಕೊಂಡಿದ್ದಾರೆ.

ಈಗಾಗಲೇ ಗದಗ ಕ್ಷೇತ್ರದ ಶಾಸಕ ಎಚ್.ಕೆ. ಪಾಟೀಲರು ಸಚಿವರಾಗಿರುವ ಹಿನ್ನೆಲೆಯಲ್ಲಿ, ಮತ್ತೊಂದು ಸಚಿವ ಸ್ಥಾನ ಗದಗ ಜಿಲ್ಲೆಗೆ ಸಿಗಬಹುದೇ ಎಂಬ ಪ್ರಶ್ನೆ ಉದ್ಭವಿಸಿದೆ.

ಇದರ ನಡುವೆ ಎಚ್.ಕೆ. ಪಾಟೀಲರಿಗೆ ಮುಂದಿನ ದಿನಗಳಲ್ಲಿ ಸ್ಪೀಕರ್ ಸ್ಥಾನ ದೊರೆಯುವ ಸಾಧ್ಯತೆಗಳೂ ಚರ್ಚೆಯಾಗುತ್ತಿದ್ದು, ಹಾಗೆ ಆಗದಿದ್ದರೆ ಗದಗ ಜಿಲ್ಲೆಗೆ ಮತ್ತೊಂದು ಸಚಿವ ಸ್ಥಾನ ನೀಡುವ ಸಾಧ್ಯತೆ ಹೆಚ್ಚಾಗಿದೆ ಎನ್ನಲಾಗಿದೆ. ಈ ಹಿನ್ನೆಲೆಯಲ್ಲಿ ನಾಲ್ಕು ಬಾರಿ ಶಾಸಕರಾಗಿ ▶▶ 3ನೇ ಪುಟಕ್ಕೆ

### "ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನ ಬೇಕು" – ಅಭಿಮಾನಿಗಳ ಒತ್ತಾಯ



ರೋಣ ಕ್ಷೇತ್ರದ ಜನತೆ ಹಾಗೂ ಕಾಂಗ್ರೆಸ್ ಕಾರ್ಯಕರ್ತರು ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನ ನೀಡಬೇಕೆಂದು ಬಲವಾಗಿ ಒತ್ತಾಯಿಸಿದ್ದಾರೆ. "ನಾಲ್ಕು ಬಾರಿ ಶಾಸಕರಾಗಿ ಆಯ್ಕೆಯಾಗಿರುವ ಜಿ.ಎಸ್. ಪಾಟೀಲರಿಗೆ ಹಿರಿತನವಿದೆ. ಈ ಬಾರಿ ಸಚಿವ ಸ್ಥಾನ ನೀಡುತ್ತಾರೆ ಎಂಬ ನಂಬಿಕೆ ನಮ್ಮದು. ಅಂತಿಮ ನಿರ್ಧಾರ ಹೈಕಮಾಂಡ್‌ದಾಗಿದೆ," ಎಂದು ಡಿ.ಡಿ. ಮೋರನಾಳ, ವಿರಯ್ಯ ಸೇಮನಕಟ್ಟಿಮಠ, ಬಸವರಡ್ಡಿ ಬಂಡಿಹಾಳ, ಅಬ್ದುಲ್ ಕಲಕೇರಿ, ಭುವನೇಶ್ವರಿ ಕಲ್ಲಿಕುಟಿಗರ, ಯಲಪ್ಪಗೌಡ ಕರಮುಡಿ, ನಾಗರಾಜ ಸಜ್ಜನ, ಸೋಮು ಹೈತಾಪುರ, ರಾಜಕುಮಾರ ಪುಜಾರ, ರವಿ ದೊಡ್ಡಮನಿ ಸೇರಿದಂತೆ ಹಲವರು ತಿಳಿಸಿದ್ದಾರೆ.

### ಅನುದಾನ ಸಮರ್ಪಕ ಬಳಕೆ ಹಾಗೂ ಶೈಕ್ಷಣಿಕ ಗುಣಮಟ್ಟ ಸುಧಾರಣೆಗೆ ಒತ್ತು

# ಶಾಲಾ ದುರಸ್ತಿಗೆ ಕ್ರಿಯಾಯೋಜನೆ ಕಡ್ಡಾಯ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿ ತಾಲೂಕಿನಲ್ಲಿ ಶಾಲಾ ಕೊಠಡಿಗಳ ದುರಸ್ತಿಗಾಗಿ ಸರ್ಕಾರದಿಂದ 20.50 ಲಕ್ಷ ರೂ. ಅನುದಾನ ಬಿಡುಗಡೆಯಾಗಿದ್ದು, ಎಪ್ರಿಲ್ ತಿಂಗಳ ಅಂತ್ಯದೊಳಗೆ ಅಗತ್ಯ ಶಾಲೆಗಳನ್ನು ಗುರುತಿಸಿ ಕ್ರಿಯಾಯೋಜನೆ ಸಿದ್ಧಪಡಿಸಿ ಸಲ್ಲಿಸುವಂತೆ ಜಿಪಂ ಮುಖ್ಯ ಯೋಜನಾಧಿಕಾರಿ ಹಾಗೂ ತಾಪಂ ಆಡಳಿತಾಧಿಕಾರಿ ಎ.ಎ. ಕಂಬಾಳಿಮಠ ಅವರು ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಗುರುವಾರ ತಾಲೂಕು ಪಂಚಾಯತ್ ಸಭಾಭವನದಲ್ಲಿ ನಡೆದ ಕೆಡಿಪಿ ಮಾಸಿಕ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಇಲಾಖಾವಾರು ಪ್ರಗತಿ ಪರಿಶೀಲನೆ ನಡೆಸಿದರು.




ಶಾಲೆಗಳ ದುರಸ್ತಿಗೆ ಒಳಪಡುವ ಕಟ್ಟಡಗಳನ್ನು ಗುರುತಿಸಿ ಮೇ ಮೊದಲ ವಾರದೊಳಗೆ ಅನುಮೋದನೆಗಾಗಿ ಕ್ರಿಯಾಯೋಜನೆ ಸಲ್ಲಿಸಬೇಕು ಎಂದು ಸೂಚಿಸಿದ ಅವರು, ಸರ್ಕಾರದಿಂದ ಬಿಡುಗಡೆಯಾದ ಅನುದಾನವನ್ನು ಸಮರ್ಪಕವಾಗಿ ಬಳಕೆ ಮಾಡಬೇಕೆಂದರು.

ತಾಲೂಕಿನ ಶೈಕ್ಷಣಿಕ ಹಿಂದುಳಿದ ಸ್ಥಿತಿಯನ್ನು ಉಲ್ಲೇಖಿಸಿದ ಅವರು, ಪಿಯುಸಿ ಫಲಿತಾಂಶ ತೃಪ್ತಿಕರವಾಗಿಲ್ಲವೆಂದು ಅಭಿಪ್ರಾಯಪಟ್ಟರು. ಶಾಲೆ ಬಿಟ್ಟ ಮಕ್ಕಳನ್ನು ಪುನಃ ಶಾಲೆಗೆ ಕರೆತರಲು ಹಾಗೂ ಶಿಕ್ಷಣದ ಗುಣಮಟ್ಟವನ್ನು ಹೆಚ್ಚಿಸಲು ಶಿಕ್ಷಕರು ವಿಶೇಷ ಗಮನ ಹರಿಸಬೇಕೆಂದು ಹೇಳಿದರು.

> ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳಿಗೆ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಸಿಂಟೆಕ್ಸ್ ಟ್ಯಾಂಕ್, ಪೈಪ್‌ಲೈನ್, ವಿದ್ಯುತ್ ಸಂಪರ್ಕ ಹಾಗೂ ಶುದ್ಧೀಕೃತ ನೀರಿನ ವ್ಯವಸ್ಥೆಗಳನ್ನು ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳಿ.
>
> **– ಎ.ಎ. ಕಂಬಾಳಿಮಠ,** ತಾಪಂ ಆಡಳಿತಾಧಿಕಾರಿ.

8ರಿಂದ 10ನೇ ತರಗತಿಯ ವಿದ್ಯಾರ್ಥಿಗಳಿಗೆ ನಿಯಮಿತ ಪರೀಕ್ಷೆಗಳನ್ನು ನಡೆಸಿ ಆತ್ಮವಿಶ್ವಾಸ ಹೆಚ್ಚಿಸುವಂತೆ ಸೂಚಿಸಿದ ಅವರು, ಈ ಕ್ರಮವನ್ನು ಸರ್ಕಾರಿ ಶಾಲೆಗಳಲ್ಲಿ ಪರಿಣಾಮಕಾರಿಯಾಗಿ ಜಾರಿಗೆ ತರಬೇಕು ಎಂದರು.

ರೈತರಿಗೆ ಬಿತ್ತನೆ ಬೀಜ ಹಾಗೂ ರಸಗೊಬ್ಬರದ ಕೊರತೆ ಉಂಟಾಗದಂತೆ ಕೃಷಿ ಇಲಾಖೆ ಮುನ್ನೆಚ್ಚರಿಕೆ ವಹಿಸಬೇಕು. ಹಣ್ಣು, ತರಕಾರಿ ಹಾಗೂ ಹೂ ಬೆಳೆಗಳ ಕುರಿತು ತೋಟಗಾರಿಕೆ ಇಲಾಖೆ ರೈತರಿಗೆ ಜಾಗೃತಿ ಮೂಡಿಸಬೇಕು ಎಂದು ಹೇಳಿದರು.

ಸಭೆಯಲ್ಲಿ ತಾಪಂ ಇಒ ಆರ್.ವಿ. ದೊಡ್ಡಮನಿ, ಯೋಜನಾಧಿಕಾರಿ ಹನುಮೇಶ ಕೊಂಡಿಕೊಪ್ಪ, ಟಿಎಚ್ಒ ಡಾ. ಸುಭಾಸ್ ದೈಗೊಂಡ, ಸಿಡಿಪಿಒ ಮೃತ್ಯುಂಜಯ ಗುಡ್ಡದಾನ್ವೇರಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ಎ. 20ರಂದು ಜಿಲ್ಲಾಡಳಿತ ಭವನದಲ್ಲಿ ಬಸವೇಶ್ವರ ಜಯಂತಿ

■ ವಿಜಯಸಾಕ್ಷಿ ಸುದ್ದಿ, 000

ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕದ ಸಾಂಸ್ಕೃತಿಕ ನಾಯಕ ಶ್ರೀ ಜಗಜ್ಯೋತಿ ಬಸವೇಶ್ವರರ ಜಯಂತಿ ಅಂಗವಾಗಿ ಎಪ್ರಿಲ್ 20ರಂದು ಬೆಳಗ್ಗೆ 11 ಗಂಟೆಗೆ ಗದಗ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ವಿಶೇಷ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಗದಗ ಇವರ ಸಹಯೋಗದಲ್ಲಿ ಈ ಕಾರ್ಯಕ್ರಮ ನಡೆಯಲಿದೆ.

ಕಾರ್ಯಕ್ರಮಕ್ಕೆ ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವ ಶಿವರಾಜ ಎಸ್. ತಂಗಡಗಿ ಅವರು ಘನ ಉಪಸ್ಥಿತಿ ವಹಿಸಲಿದ್ದಾರೆ. ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಅಧ್ಯಕ್ಷತೆ ವಹಿಸಲಿದ್ದಾರೆ.



ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಶಾಸಕ ಹಾಗೂ ಸರ್ಕಾರಿ ಮುಖ್ಯ ಸಚೇತಕ ಸಲೀಂ ಅಹ್ಮದ್, ಕರ್ನಾಟಕ ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ, ಹಾವೇರಿ ಸಂಸದ ಹಾಗೂ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಸಂಸದ ಪಿ.ಸಿ. ಗದ್ದಿಗೌಡರ, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್. ಪಾಟೀಲ, ನರಗುಂದ ಶಾಸಕ ಸಿ.ಸಿ. ಪಾಟೀಲ, ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ. ಸಂಕನೂರ ಹಾಗೂ ಪ್ರದೀಪ ಶೆಟ್ಟರ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ ಹಾಗೂ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ಭಾಗವಹಿಸಲಿದ್ದಾರೆ.

ವಿಶೇಷ ಆಹ್ವಾನಿತರಾಗಿ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಕಾರ್ಯದರ್ಶಿ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತೆ ಜಾನಕಿ ಕೆ.ಎಂ ಉಪಸ್ಥಿತರಾಗಲಿದ್ದಾರೆ.

ಮೊರಾರ್ಜಿ ದೇಸಾಯಿ ವಸತಿ ಪದವಿಪೂರ್ವ ವಿಜ್ಞಾನ ಮಹಾವಿದ್ಯಾಲಯದ ಕನ್ನಡ ಉಪನ್ಯಾಸಕರಾದ ಸೋಮಶೇಖರ ಕನಕಾಚಲ ಅವರು ಉಪನ್ಯಾಸ ನೀಡಲಿದ್ದಾರೆ. ಜಿಲ್ಲಾಧಿಕಾರಿ ಹಾಗೂ ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಅಪರ ಜಿಲ್ಲಾಧಿಕಾರಿ ಹಾಗೂ ಅಪರ ಜಿಲ್ಲಾ ದಂಡಾಧಿಕಾರಿ ಡಾ. ದುರ್ಗೇಶ್ ಕೆ.ಆರ್. ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಬಸವರಾಜ ವಿ. ಬಳ್ಳಾರಿ ಸರ್ವರಿಗೂ ಕಾರ್ಯಕ್ರಮಕ್ಕೆ ಸ್ವಾಗತ ಕೋರಿದ್ದಾರೆ.

## ಪರೀಕ್ಷಾ ಕೇಂದ್ರಗಳ ಸುತ್ತ ಪ್ರತಿಬಂಧಕಾಜ್ಞೆ ಜಾರಿ

■ ವಿಜಯಸಾಕ್ಷಿ ಸುದ್ದಿ, ಗದಗ

2026ನೇ ಸಾಲಿನ ವೃತ್ತಿಪರ ಕೋರ್ಸ್‌ಗಳ ಪ್ರವೇಶಕ್ಕಾಗಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಸಾಮಾನ್ಯ ಪ್ರವೇಶ ಪರೀಕ್ಷೆ (CET–2026) ಅನ್ನು ಎಪ್ರಿಲ್ 23 ಮತ್ತು 24ರಂದು ನಡೆಸಲಿದ್ದು, ಗದಗ ಜಿಲ್ಲೆಯಲ್ಲಿ ಒಟ್ಟು 10 ಪರೀಕ್ಷಾ ಕೇಂದ್ರಗಳನ್ನು ಗುರುತಿಸಲಾಗಿದೆ.

ಪರೀಕ್ಷೆಯ ವೇಳೆ ನಕಲು, ಪರಪರೀಕ್ಷೆ (ಇನ್ನೊಬ್ಬರ ಬದಲು ಪರೀಕ್ಷೆಗೆ ಹಾಜರಾಗುವುದು) ಸೇರಿದಂತೆ ಯಾವುದೇ ರೀತಿಯ ಅವ್ಯವಹಾರಗಳನ್ನು ತಡೆಯಲು ಹಾಗೂ ಶಾಂತಿ–ಸುವ್ಯವಸ್ಥೆ ಕಾಪಾಡುವ ಉದ್ದೇಶದಿಂದ ಪರೀಕ್ಷಾ ಕೇಂದ್ರಗಳ ಸುತ್ತಲಿನ 200 ಮೀಟರ್ ವ್ಯಾಪ್ತಿಯನ್ನು ನಿಷೇಧಿತ ಪ್ರದೇಶವೆಂದು ಘೋಷಿಸಲಾಗಿದೆ.

ಈ ಹಿನ್ನೆಲೆಯಲ್ಲಿ ಎಪ್ರಿಲ್ 23 ಮತ್ತು 24ರಂದು ಬೆಳಿಗ್ಗೆ 8.30ರಿಂದ ಸಂಜೆ 5ರವರೆಗೆ ಪ್ರತಿಬಂಧಕಾಜ್ಞೆ ಜಾರಿಯಲ್ಲಿರಲಿದೆ. ಪರೀಕ್ಷಾರ್ಥಿಗಳು ಹಾಗೂ ಕರ್ತವ್ಯ ನಿರ್ವಹಿಸುವ ಅಧಿಕಾರಿಗಳು, ಸಿಬ್ಬಂದಿಗಳನ್ನು ಹೊರತುಪಡಿಸಿ ಇತರರಿಗೆ ಗುಂಪು ಸೇರುವುದು ಅಥವಾ ಪ್ರವೇಶಿಸುವುದನ್ನು ನಿಷೇಧಿಸಲಾಗಿದೆ.

ಇದೇ ವೇಳೆ, ಪರೀಕ್ಷಾ ಕೇಂದ್ರಗಳ ಸುತ್ತಲಿನ 200 ಮೀಟರ್ ವ್ಯಾಪ್ತಿಯಲ್ಲಿರುವ ಝೆರಾಕ್ಸ್ ಅಂಗಡಿಗಳು, ಬುಕ್‌ಸ್ಟಾಲ್‌ಗಳು ಹಾಗೂ ಫೋಟೋ ಕಾಪಿಯರ್ ಕೇಂದ್ರಗಳನ್ನು ಮುಚ್ಚುವಂತೆ ಆದೇಶಿಸಲಾಗಿದೆ.


ಪರೀಕ್ಷಾ ಕೇಂದ್ರಗಳಿಗೆ ಮೊಬೈಲ್ ಫೋನ್, ಕೈಗಡಿಯಾರ, ಬ್ಲೂಟೂತ್ ಸಾಧನಗಳು, ಕ್ಯಾಲ್ಕುಲೇಟರ್, ವೈರ್‌ಲೆಸ್ ಉಪಕರಣಗಳು, ಪೇಪರ್ ಚೀಟಿಗಳು, ಪುಸ್ತಕಗಳು ಸೇರಿದಂತೆ ಯಾವುದೇ ಎಲೆಕ್ಟ್ರಾನಿಕ್ ಅಥವಾ ಸಂವಹನ ಸಾಧನಗಳನ್ನು ತರಲು ಕಟ್ಟುನಿಟ್ಟಿನ ನಿಷೇಧ ಹೇರಲಾಗಿದೆ. ಪರೀಕ್ಷಾ ಕೊಠಡಿಗೆ ಯಾವುದೇ ರೀತಿಯ ಕೈಗಡಿಯಾರವನ್ನು ಸಹ ತೆಗೆದುಕೊಂಡು ಹೋಗಲು ಅವಕಾಶ ಇರುವುದಿಲ್ಲ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಎ.21ರಂದು ಶಂಕರಾಚಾರ್ಯರ ಜಯಂತಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಆದಿ ಜಗದ್ಗುರು ಶ್ರೀ ಶಂಕರಾಚಾರ್ಯರ ಜಯಂತಿಯನ್ನು ಎಪ್ರಿಲ್ 21ರಂದು ಬೆಳಿಗ್ಗೆ 11 ಗಂಟೆಗೆ ನಗರದ ಸಂಭಾಪುರ ರಸ್ತೆಯಲ್ಲಿರುವ ಶ್ರೀ ಶಂಕರಮಠದಲ್ಲಿ ಆಚರಿಸಲಾಗುತ್ತದೆ.

ಕಾರ್ಯಕ್ರಮಕ್ಕೆ ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವ ಶಿವರಾಜ ಎಸ್. ತಂಗಡಗಿ ಅವರು ಘನ ಉಪಸ್ಥಿತಿ ವಹಿಸಲಿದ್ದಾರೆ. ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಅವರು ಅಧ್ಯಕ್ಷತೆ ವಹಿಸಲಿದ್ದಾರೆ.



ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಶಾಸಕ ಹಾಗೂ ಸರ್ಕಾರಿ ಮುಖ್ಯ ಸಚೇತಕ ಸಲೀಂ ಅಹ್ಮದ್, ಕರ್ನಾಟಕ ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ, ಹಾವೇರಿ ಸಂಸದ ಹಾಗೂ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಸಂಸದ ಪಿ.ಸಿ. ಗದ್ದಿಗೌಡರ, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್. ಪಾಟೀಲ, ನರಗುಂದ ಶಾಸಕ ಸಿ.ಸಿ. ಪಾಟೀಲ, ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ. ಸಂಕನೂರ ಹಾಗೂ ಪ್ರದೀಪ ಶೆಟ್ಟರ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ ಹಾಗೂ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ಭಾಗವಹಿಸಲಿದ್ದಾರೆ.

ವಿಶೇಷ ಆಹ್ವಾನಿತರಾಗಿ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಕಾರ್ಯದರ್ಶಿ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತೆ ಜಾನಕಿ ಕೆ.ಎಂ ಉಪಸ್ಥಿತರಾಗಲಿದ್ದಾರೆ.

ಎಲ್.ಐ.ಸಿ. ಹಿರಿಯ ಅಭಿವೃದ್ಧಿ ಅಧಿಕಾರಿಗಳು ಹಾಗೂ ಸಂಸ್ಕೃತಿ ಚಿಂತಕರಾದ ಎಂ.ಟಿ. ಭಟ್ ಅವರು ಉಪನ್ಯಾಸ ನೀಡಲಿದ್ದಾರೆ.

ಜಿಲ್ಲಾಧಿಕಾರಿ ಹಾಗೂ ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಅಪರ ಜಿಲ್ಲಾಧಿಕಾರಿ ಹಾಗೂ ಅಪರ ಜಿಲ್ಲಾ ದಂಡಾಧಿಕಾರಿ ಡಾ. ದುರ್ಗೇಶ್ ಕೆ.ಆರ್. ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಬಸವರಾಜ ವಿ. ಬಳ್ಳಾರಿ ಸರ್ವರಿಗೂ ಕಾರ್ಯಕ್ರಮಕ್ಕೆ ಸ್ವಾಗತ ಕೋರಿದ್ದಾರೆ.

## ದೈಹಿಕ-ಮಾನಸಿಕ ಸದೃಢತೆಗೆ ಆರೋಗ್ಯ ಮುಖ್ಯ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ದೈಹಿಕ ಹಾಗೂ ಮಾನಸಿಕ ಸದೃಢತೆಗೆ ಆರೋಗ್ಯ ಪ್ರಮುಖ ಪಾತ್ರ ವಹಿಸುತ್ತದೆ ಎಂದು ಡಾ. ಎಸ್.ಆರ್. ಮಡಿವಾಳರ ಹೇಳಿದರು.

ಸೊರಟೂರ ಗ್ರಾಮದ ಆಯುಷ್ಮಾನ್ ಆರೋಗ್ಯ ಕೇಂದ್ರದಲ್ಲಿ ಕಣವಿ ಪ್ರಾಥಮಿಕ ಆರೋಗ್ಯ ಕೇಂದ್ರದ ವತಿಯಿಂದ ವಿಶ್ವ ಆರೋಗ್ಯ ದಿನಾಚರಣೆ ಅಂಗವಾಗಿ ಸಾರ್ವಜನಿಕರಿಗೆ ಆರೋಗ್ಯ ಜಾಗೃತಿ ಕುರಿತು ಮಾಹಿತಿ ನೀಡಿ ಮಾತನಾಡಿದ ಅವರು, ಆರೋಗ್ಯ ಪ್ರತಿಯೊಬ್ಬರ ಹಕ್ಕು ಹಾಗೂ ಆದ್ಯ ಕರ್ತವ್ಯವಾಗಿದ್ದು, ಸುಸ್ಥಿರ ಆರೋಗ್ಯವು ದೈಹಿಕ, ಮಾನಸಿಕ ಮತ್ತು ಸಾಮಾಜಿಕ ಯೋಗಕ್ಷೇಮವನ್ನು ಒಳಗೊಂಡಿದೆ. ಉತ್ತಮ ಪೌಷ್ಟಿಕ ಆಹಾರ ಸೇವನೆ ಮತ್ತು ಜಾಗೃತ ಜೀವನಶೈಲಿಯಿಂದ ಆರೋಗ್ಯಕರ ಸಮಾಜ ನಿರ್ಮಾಣ ಸಾಧ್ಯವೆಂದು ತಿಳಿಸಿದರು.

ಡಾ. ಅರುಣಪ್ರಸಾದ ಮಾತನಾಡಿ, ಬಿಪಿ ಮತ್ತು ಮಧುಮೇಹದಂತಹ ಆರೋಗ್ಯ ಸಮಸ್ಯೆಗಳು ಹೆಚ್ಚುತ್ತಿರುವುದರಿಂದ ಲಕ್ಷಣಗಳು ಕಂಡ ತಕ್ಷಣವೇ ಸಮೀಪದ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ತಪಾಸಣೆ ಮಾಡಿಸಿಕೊಳ್ಳುವುದು ಅಗತ್ಯ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಆರ್.ವಿ. ಗುರಣ್ಣವರ, ಡೆನಿಯಲ್, ಗಣೇಶ ಬಗಾಡೆ, ಯೋಗ ಶಿಕ್ಷಕ ಹೊನಕೇರಪ್ಪ ಗಾರವಾಡ, ರಿಯಾಜ ಕೋಡಗಾನೂರ, ಗಂಗಮ್ಮ ನೇಸರಗಿ, ವಾಣಿಶ್ರೀ ಹಾಲಗೇರಿ, ಜ್ಯೋತಿ ಸಿರಗಣ್ಣವರ, ಗಂಗಮ್ಮ ಗಾರವಾಡ, ವೀಣಾ ಮಡ್ಡಕಾರ ಹಾಗೂ ಆಶಾ ಕಾರ್ಯಕರ್ತೆಯರು ಉಪಸ್ಥಿತರಿದ್ದರು.

# ಅಂಬೇಡ್ಕರ್ ಅರಿಯಲು ಓದು ಅಗತ್ಯ

### ಜಿಲ್ಲಾ ಕಸಾಪದಿಂದ ಅಂಬೇಡ್ಕರ್ ಜಯಂತಿಯಲ್ಲಿ ಆರ್.ಎಲ್. ಹಂಸನೂರ

"ಅಂಬೇಡ್ಕರ್ ಅವರ ಚಿಂತನೆಗಳಿಂದಲೇ ಭಾರತೀಯ ಸಂವಿಧಾನಕ್ಕೆ ಶ್ರೇಷ್ಠತೆ ದೊರಕಿದೆ. ಜಾತಿ ವ್ಯವಸ್ಥೆಯ ನಡುವೆಯೂ ಅವರ ವಿಚಾರಗಳನ್ನು ಇನ್ನೂ ಸಂಪೂರ್ಣವಾಗಿ ಅರ್ಥೈಸಿಕೊಳ್ಳಲಾಗಿಲ್ಲ. ಮನುಷ್ಯತ್ವವೇ ಮೇಲುಗೈ ಸಾಧಿಸಬೇಕು"

**– ಪ್ರೊ. ಕೆ.ಎಚ್. ಬೇಲೂರ.**



■ವಿಜಯಸಾಕ್ಷಿ ಸುದ್ದಿ, ಗದಗ

ಅಂಬೇಡ್ಕರ್ ತಾವು ಅನುಭವಿಸಿದ ಸಂಕಟಗಳಿಗೆ ಪರಿಹಾರವನ್ನು ಸಂವಿಧಾನದ ಮೂಲಕ ನೀಡಿದರು. ಸ್ವಾತಂತ್ರ್ಯ, ಸಮಾನತೆ ಹಾಗೂ ಭ್ರಾತೃತ್ವದ ಮೌಲ್ಯಗಳಡಿ ಸಮಸಮಾಜ ನಿರ್ಮಾಣದ ಕನಸನ್ನು ಕಂಡ ಅವರು, ಶಿಕ್ಷಣ, ಸಂಘಟನೆ ಮತ್ತು ಹೋರಾಟದ ಮೂಲಕ ಸಮಾಜೋದ್ಧಾರಕ್ಕೆ ಜೀವನವನ್ನೇ ಮುಡಿಪಾಗಿಟ್ಟ ಮಹಾನ್ ಚಿಂತಕರು ಎಂದು ಡಾ. ಆರ್.ಎಲ್. ಹಂಸನೂರ ಹೇಳಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ತೋಂಟದ ಸಿದ್ಧಲಿಂಗಶ್ರೀಗಳ ಕನ್ನಡ ಭವನದಲ್ಲಿ ನಡೆದ ಡಾ. ಬಿ.ಆರ್. ಅಂಬೇಡ್ಕರ್ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಅಂಬೇಡ್ಕರ್ ಅವರ ಅಧ್ಯಯನಶೀಲತೆ ಜಗತ್ತಿಗೆ ಮಾದರಿಯಾಗಿದ್ದು, ಅವರ ಬರಹಗಳಲ್ಲಿ ಭಾರತದ ಸಮಸ್ಯೆಗಳಿಗೆ ಸ್ಪಷ್ಟ ಪರಿಹಾರಗಳನ್ನು ಸೂಚಿಸಲಾಗಿದೆ. ಇಂದಿನ ಪೀಳಿಗೆ ಅವರಿಗೆ ಅರಿವು ಪಡೆಯಬೇಕಾದರೆ ಅವರ ಕೃತಿಗಳನ್ನು ಓದುವ ಅಭ್ಯಾಸ ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ನಿರಂತರ ಓದಿನ ಮೂಲಕ ಅಪಾರ ಜ್ಞಾನವನ್ನು ಸಂಪಾದಿಸಿದ ಅಂಬೇಡ್ಕರ್ ಅವರು ಸಮಾಜದ ಉನ್ನತಿಗಾಗಿ ತಮ್ಮ ಬದುಕನ್ನು ಸಮರ್ಪಿಸಿದರು. ಮಾನವತೆಯ ತಳಹದಿಯಲ್ಲಿ ಸಂವಿಧಾನವನ್ನು ರೂಪಿಸಿ, ಸರ್ವರಿಗೂ ಸಮಬಾಳು-ಸಮಪಾಲಿನ ಕನಸನ್ನು ಸಾಕಾರಗೊಳಿಸಲು ಶ್ರಮಿಸಿದರು ಎಂದು ಹೇಳಿದರು. ವೇದಿಕೆಯಲ್ಲಿ ಅನ್ನದಾನಿ ಹಿರೇಮಠ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಬಿ.ಎಲ್. ಚವ್ಹಾಣ, ರತ್ನಕ್ಕ ಪಾಟೀಲ, ಎಸ್.ಯು. ಸಜ್ಜನಶೆಟ್ಟರ, ರಾಜಶೇಖರ ದಾನರಡ್ಡಿ, ಸಿ.ಎಂ. ಮಾರನಬಸರಿ, ಬಿ.ಬಿ. ಹೊಳಗುಂದಿ ಸೇರಿದಂತೆ ಹಲವರು ಭಾಗವಹಿಸಿದ್ದರು.

## ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶ್ರೇಯಸ್ ರಾಜಾಪೂರ ಪ್ರಥಮ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಕೆ.ಎಲ್.ಇ ಸೋಸಾಯಟಿಯ ಸಿ.ಬಿ.ಎಸ್.ಇ ಶಾಲೆಯ ವಿದ್ಯಾರ್ಥಿ ಕುಮಾರ ಶ್ರೇಯಸ್ ಬಸವರಾಜ ರಾಜಾಪೂರ ಅವರು 2026ನೇ ಸಾಲಿನ ಎಸ್‌ಎಸ್‌ಎಲ್‌ಸಿ (ಸಿ.ಬಿ.ಎಸ್.ಇ) ಪರೀಕ್ಷೆಯಲ್ಲಿ ಶೇಕಡಾ 96.20 ಅಂಕಗಳನ್ನು ಪಡೆದು ಗದಗ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದು ಗಮನಾರ್ಹ ಸಾಧನೆ ಮಾಡಿದ್ದಾರೆ. ಶ್ರೇಯಸ್ ಅವರ ಈ ಸಾಧನೆಯಿಂದ ಶಾಲೆಯ ಕೀರ್ತಿ ಹೆಚ್ಚಾಗಿದ್ದು, ಅವರ ಶೈಕ್ಷಣಿಕ ಸಾಧನೆಯನ್ನು ಕೆ.ಎಲ್.ಇ ಸೋಸಾಯಟಿ ಸಿ.ಬಿ.ಎಸ್.ಇ ಶಾಲೆಯ ಆಡಳಿತ ಮಂಡಳಿ, ಪ್ರಾಚಾರ್ಯರು, ಶಿಕ್ಷಕರು ಹಾಗೂ ಸಿಬ್ಬಂದಿ ವರ್ಗ ಅಭಿನಂದಿಸಿದ್ದಾರೆ.

## ನಗರಸಭೆಯಲ್ಲಿ ಡಾ. ಅಂಬೇಡ್ಕರ್ ಜಯಂತಿ ಆಚರಣೆ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರಸಭೆ ಕಾರ್ಯಾಲಯದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತಿಯನ್ನು ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡುವ ಮೂಲಕ ಆಚರಿಸಲಾಯಿತು. ಈ ಸಂದರ್ಭದಲ್ಲಿ ಪೌರಾಯುಕ್ತರಾದ ಆರ್.ಎಸ್. ಪವಾರ್, ಪಿಎಸ್‌ಐ ಮಾರುತಿ ಜೋಗದಂಡಕರ, ಎಇಇ ಎಲ್.ಎಂ. ಜೋಗದಂಡಕರ, ಎಇಇ ಎ.ವೈ. ಬಡಿ, ಎಸ್.ವೈ. ಸಂಕನಗೌಡರ್, ಮ್ಯಾನೇಜರ್ ಪಿ.ಎಫ್. ಶೇರಖಾನೆ, ಆರ್‌ಒ ಎಂ.ಎಸ್. ಹಡಪದ್, ಜೆಇ ಐ.ಜಿ. ದುರಗಣ್ಣನವರ್, ಎಂ.ಎಂ. ಮಕಾಂದರ್, ಎಸ್.ಎ. ಅಗಸಿಮನಿ, ಡಿ.ಎನ್. ಪವಾರ್, ಎಸ್.ಎನ್. ದಳವಾಯಿ, ಎಲ್.ಜಿ. ಗಾಡಗೋಳಿ, ಡಿ.ಎಚ್. ಸೀತಿಮನಿ, ಎಂ.ಎಸ್. ಹೂಗಾರ್ ಹಾಗೂ ಆರೋಗ್ಯ ವಿಭಾಗದ ಕಮ್ಯೂನಿಟಿ ಮೊಬೈಲೈಸರ್ ಸಿಬ್ಬಂದಿ ಸೇರಿದಂತೆ ನಗರಸಭೆಯ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

## ಹಳೆಯ ವಿದ್ಯಾರ್ಥಿಗಳ ಸಂಭ್ರಮದ ಭೇಟಿ!

### ನೆನಪಿನಂಗಳದಲ್ಲಿ ಕಳೆದ ದಿನಗಳನ್ನು ಸ್ಮರಿಸಿ ಭಾವುಕರಾದ ಸ್ನೇಹಿತರ ಬಳಗ

■ವಿಜಯಸಾಕ್ಷಿ ಸುದ್ದಿ, ಗದಗ

ಮೂವತ್ತೆಂಟು ವರ್ಷಗಳ ಹಿಂದೆ ಒಟ್ಟಿಗೆ ಅಧ್ಯಯನ ಮಾಡಿದ ಹಳೆಯ ವಿದ್ಯಾರ್ಥಿಗಳು ಮತ್ತೆ ಒಂದಾಗಿ ತಮ್ಮ ನೆನಪಿನ ಬುತ್ತಿಯನ್ನು ಬಿಚ್ಚಿಟ್ಟ ಘಟನೆ ಗದಗದಲ್ಲಿ ನಡೆಯಿತು.

"ವಿದ್ಯಾರ್ಥಿ ಜೀವನದ ನೆನಪುಗಳು ಎಂದಿಗೂ ಮರೆಯಲಾಗದವು; ಸ್ನೇಹಿತರೊಂದಿಗೆ ಮತ್ತೆ ಒಂದಾಗುವುದು ಜೀವನದ ಅತ್ಯಂತ ಸಂತೋಷದ ಕ್ಷಣ" ಎಂದು ಭಾಗವಹಿಸಿದ ಹಳೆಯ ವಿದ್ಯಾರ್ಥಿಗಳು ಅಭಿಪ್ರಾಯಪಟ್ಟರು.

ಸ್ಥಳೀಯ ಕೆಎಲ್‌ಇ ಸಂಸ್ಥೆಯ ಶ್ರೀ ಜಗದ್ಗುರು ತೋಂಟದಾರ್ಯ ಕಾಲೇಜಿನ ಆವರಣಕ್ಕೆ ಆಗಮಿಸಿದ ಹಳೆಯ ವಿದ್ಯಾರ್ಥಿಗಳು, ದೀರ್ಘ ಅವಧಿಯ ಬಳಿಕ ಪರಸ್ಪರರನ್ನು ಭೇಟಿಯಾಗಿ ಭಾವುಕರಾದರು. ಬಹುತೇಕರು ಈಗ ಅರವತ್ತರ ವಯಸ್ಸಿನವರಾಗಿದ್ದು, ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ.

1987ರಲ್ಲಿ ರಸಾಯನಶಾಸ್ತ್ರವನ್ನು ಮುಖ್ಯ ವಿಷಯವಾಗಿ ಅಧ್ಯಯನ ಮಾಡಿದ ವಿದ್ಯಾರ್ಥಿಗಳು, ಭೌತಶಾಸ್ತ್ರ, ಪ್ರಾಣಿಶಾಸ್ತ್ರ ಹಾಗೂ ಸಸ್ಯಶಾಸ್ತ್ರ ಪ್ರಯೋಗಾಲಯಗಳಿಗೆ ಭೇಟಿ ನೀಡಿ ತಮ್ಮ ವಿದ್ಯಾರ್ಥಿ ಜೀವನದ ಅನುಭವಗಳನ್ನು ಸ್ಮರಿಸಿದರು. ತಮ್ಮ ಕಾಲದ ತರಗತಿ ಕೊಠಡಿಗಳಿಗೆ ತೆರಳಿ ಮತ್ತೆ ವಿದ್ಯಾರ್ಥಿಗಳಂತೆ ಸಂಭ್ರಮಿಸಿದರು.

ತಮಗೆ ವಿದ್ಯಾಭ್ಯಾಸ ನೀಡಿದ ಉಪನ್ಯಾಸಕರಾದ ಕಲಬುರ್ಗಿ ಸರ್, ನ್ಯಾಮತಿ, ಪೊಲೀಸ್ ಪಾಟೀಲ, ಪಟ್ಟಣಶೆಟ್ಟಿ, ಬಳ್ಳಾರಿ, ವಸ್ತ್ರದ, ಮಮ್ಮಿಗಟ್ಟಿ, ಅಂಗಡಿ, ಪಾಟೀಲ ಸರ್ ಅವರನ್ನು ನೆನೆದು ಗೌರವಿಸಿದರು.

ಈ ಸಂದರ್ಭದಲ್ಲಿ ಅಮೆರಿಕಾದ ಬಾಸ್ಟನ್‌ನಲ್ಲಿ ನೆಲೆಸಿರುವ ಸಂಶೋಧಕ ಡಾ. ರಮೇಶ್ ಜಡಿ, ಮಹಾರಾಷ್ಟ್ರದಲ್ಲಿರುವ ಉಪನ್ಯಾಸಕ ದತ್ತು (ಆವಿನ್), ಶಂಕರ್ ವಾದೋನೆ, ವಾಣಿ ವಾಸುದೇವ ಶಾನಭಾಗ ಹಾಗೂ ಶಂಭು ಬಾವಿಹಳ್ಳಿ ಅವರಿಗೆ ನೆನಪಿನ ಕಾಣಿಕೆ ನೀಡಿ ಸನ್ಮಾನಿಸಲಾಯಿತು. ಶ್ರೀಮತಿ ಗಿರಿಜಾ ಮುಳಗುಂದ ಸಿಹಿ ಹಂಚಿ ಸಂಭ್ರಮಿಸಿದರು.

ಕಾರ್ಯಕ್ರಮದಲ್ಲಿ ಶಿಕ್ಷಕ-ಸಾಹಿತಿಗಳಾದ ಶಿವಲಿಂಗಯ್ಯ ಹಿರೇಮಠ ಹಾಗೂ ನೀಲಕಂಠ ಮರಡಿ ಭಾಗವಹಿಸಿದ್ದರು. ಕೆವಿಎಸ್‌ಆರ್ ಕಾಲೇಜಿನ ನಿವೃತ್ತ ಪ್ರಾಂಶುಪಾಲ ಉಮೇಶ್ ಹಿರೇಮಠ, ಎಚ್‌ಸಿಇಎಸ್‌ನ ನಿವೃತ್ತ ಮುಖ್ಯಾಧ್ಯಾಪಕ ಸಂಗಪ್ಪ ಅಂಗಡಿ ಉಪಸ್ಥಿತರಿದ್ದರು.

ಅಶೋಕ ಉಮಚಗಿ ಹಾಗೂ ನಿವೃತ್ತ ಶಿಕ್ಷಕ ಸುರೇಶ್ ಸಜ್ಜನರ್ ಅವರನ್ನು ಅಭಿನಂದಿಸಲಾಯಿತು. ರಾಚಯ್ಯ ಹಿರೇಮಠ, ಮಹಾಲಿಂಗಪ್ಪ ಕಣವಿ, ಪ್ರಾಣೇಶ್ ಕುಲಕರ್ಣಿ, ಕೊಟ್ರೇಶ್ ಗೌಡ ಹಾಗೂ ಸುಮತಿ ಗದಗಿನಮಠ ಸೇರಿದಂತೆ ಹಲವರು ಭಾಗವಹಿಸಿದ್ದರು.

ಭೇಟಿಗೆ ಸಹಕರಿಸಿದ ಪದವಿ ಕಾಲೇಜಿನ ಪ್ರಾಂಶುಪಾಲ ಪಿ.ಜಿ. ಪಾಟೀಲ ಅವರನ್ನು ಸನ್ಮಾನಿಸಿ ಅಭಿನಂದಿಸಲಾಯಿತು. ಪಿಯು ಕಾಲೇಜಿನ ಹಾವೇರಿ ಸರ್ ಹಾಗೂ ಸಿಬ್ಬಂದಿಯನ್ನು ಗೌರವಿಸಲಾಯಿತು.



## ಅಭಿವೃದ್ಧಿ ನಿರ್ಲಕ್ಷಿಸಿದರೆ ಹೋರಾಟಕ್ಕೆ ಎಚ್ಚರಿಕೆ

### ಹದಗೆಟ್ಟ ರಸ್ತೆಗಳ ದುರಸ್ತಿ ಒತ್ತಾಯಿಸಿ ರೈತ ಸಂಘದ ಮನವಿ



■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಾಲೂಕಿನಾದ್ಯಂತ ಹದಗೆಟ್ಟಿರುವ ರಸ್ತೆಗಳನ್ನು ಕೂಡಲೇ ದುರಸ್ತಿಗೊಳಿಸುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘದ ಹಗರಿಬೊಮ್ಮನಹಳ್ಳಿ ತಾಲೂಕು ಸಮಿತಿಯವರು ತಹಸೀಲ್ದಾರ್ ಆರ್. ಕವಿತಾ ಅವರಿಗೆ ಮನವಿ ಪತ್ರ ಸಲ್ಲಿಸಿದರು.

"ರಸ್ತೆಗಳಿಂದ ಸರ್ಕಾರಕ್ಕೆ ಆದಾಯ ಬರುತ್ತಿದ್ದರೂ, ಹಳ್ಳಿಗಳ ರಸ್ತೆ ಅಭಿವೃದ್ಧಿಯನ್ನು ನಿರ್ಲಕ್ಷಿಸಲಾಗಿದೆ. ತಕ್ಷಣವೇ ದುರಸ್ತಿ ಕಾರ್ಯ ಆರಂಭವಾಗದಿದ್ದರೆ ಹಗರಿಬೊಮ್ಮನಹಳ್ಳಿ ಕೇಂದ್ರದಲ್ಲಿ 'ರಸ್ತೆ ತಡೆ' ನಡೆಸಿ ಉಗ್ರ ಹೋರಾಟ ಕೈಗೊಳ್ಳಲಾಗುವುದು."

**– ರವಿಕುಮಾರ್ ತಂಬ್ರಹಳ್ಳಿ,** ರೈತ ಸಂಘದ ಜಿಲ್ಲಾ ಯುವ ಘಟಕದ ಅಧ್ಯಕ್ಷ.

ರಾಜ್ಯ ರೈತ ಸಂಘದ ಕಾರ್ಯಾಧ್ಯಕ್ಷ ಜೆ.ಎಂ. ವೀರಸಂಗಯ್ಯ ಮಾತನಾಡಿ, ಹಳ್ಳಿಗಳಿಂದ ತಾಲೂಕು ಕೇಂದ್ರಕ್ಕೆ ಸಂಪರ್ಕ ಕಲ್ಪಿಸುವ ಪ್ರಮುಖ ರಸ್ತೆಗಳು, ಜಿಲ್ಲಾ ಹಾಗೂ ರಾಜ್ಯ ಹೆದ್ದಾರಿಗಳು ಸಂಪೂರ್ಣವಾಗಿ ಹದಗೆಟ್ಟು ಗುಂಡಿಮಯವಾಗಿವೆ. ಇದರಿಂದ ರೋಗಿಗಳು, ವಿದ್ಯಾರ್ಥಿಗಳು ಹಾಗೂ ರೈತರು ತೀವ್ರ ಸಂಕಷ್ಟ ಅನುಭವಿಸುತ್ತಿದ್ದಾರೆ ಎಂದು ಹೇಳಿದರು.

ಹದಗೆಟ್ಟಿರುವ ರಸ್ತೆಗಳನ್ನು ತಾತ್ಕಾಲಿಕ ತೇಪೆ ಹಚ್ಚುವ ಬದಲು ಸಂಪೂರ್ಣವಾಗಿ ಹೊಸದಾಗಿ ನಿರ್ಮಿಸಬೇಕು. ಮೂಲಸೌಕರ್ಯ ವಂಚಿತ ಹಳ್ಳಿಗಳಿಗೆ ಆದ್ಯತೆಯ ಮೇರೆಗೆ ಸಂಪರ್ಕ ರಸ್ತೆಗಳನ್ನು ಅಭಿವೃದ್ಧಿಪಡಿಸಬೇಕು. ರಸ್ತೆ ದುರಸ್ತಿ ಕಾಮಗಾರಿಗಳಿಗೆ ಸರ್ಕಾರ ತಕ್ಷಣ ಅನುದಾನ ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ತಾಲೂಕು ಅಧ್ಯಕ್ಷ ಬಸವನಗೌಡ, ಪ್ರಧಾನ ಕಾರ್ಯದರ್ಶಿ ಎ. ನಾಗರಾಜ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಪರಿಸರ ಮಿತ್ರ ಟ್ರಸ್ಟ್‌ನಿಂದ ಮಾನವೀಯ ಸೇವೆ

### ಹಂಪಸಾಗರ-2ರಲ್ಲಿ ಶುದ್ಧ ಕುಡಿಯುವ ನೀರಿನ ಅರವಟ್ಟಿಗೆ ಉದ್ಘಾಟನೆ



■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಹಗರಿಬೊಮ್ಮನಹಳ್ಳಿ ತಾಲೂಕಿನ ಹಂಪಸಾಗರ-2 ಗ್ರಾಮದ ಹೊಸ ಬಸ್ ನಿಲ್ದಾಣದ ಸಮೀಪ ಪರಿಸರ ಮಿತ್ರ ಗ್ರಾಮೀಣ ಶಿಕ್ಷಣ ಮತ್ತು ಸಾಮಾಜಿಕ ಟ್ರಸ್ಟ್ ಹಾಗೂ ಹಸಿರು ಸ್ನೇಹ ಬಳಗದ ವತಿಯಿಂದ ಶುದ್ಧ ಕುಡಿಯುವ ನೀರಿನ ಅರವಟ್ಟಿಗೆಯನ್ನು ಆರಂಭಿಸಲಾಯಿತು.

ನಿವೃತ್ತ ಯೋಧರಾದ ಮಲ್ಲಪ್ಪ ತಳಕಲ್ ಅವರು ಅರವಟ್ಟಿಗೆಯನ್ನು ಉದ್ಘಾಟಿಸಿದರು. ಬೇಸಿಗೆಯ ತೀವ್ರ ತಾಪಮಾನದಿಂದ ಸಾರ್ವಜನಿಕರು ಹಾಗೂ ಪ್ರಯಾಣಿಕರು ತೊಂದರೆ ಅನುಭವಿಸುತ್ತಿರುವ ಹಿನ್ನೆಲೆಯಲ್ಲಿ, ಅವರಿಗೆ ತಂಪು ನೀಡಲು ಹಾಗೂ ಕುಡಿಯುವ ನೀರಿನ ಸೌಲಭ್ಯ ಒದಗಿಸುವ ಉದ್ದೇಶದಿಂದ ಈ ಅರವಟ್ಟಿಗೆಯನ್ನು ಸ್ಥಾಪಿಸಲಾಗಿದೆ.

ಪರಿಸರ ಮಿತ್ರ ಟ್ರಸ್ಟ್ ಹಾಗೂ ಹಸಿರು ಸ್ನೇಹ ಬಳಗದ ಸದಸ್ಯರು ಈ ಕಾರ್ಯದ ಮೂಲಕ ಸಮಾಜ ಸೇವೆಗೆ ಮುಂದಾಗಿದ್ದು, ಸಾರ್ವಜನಿಕರಿಂದ ಮೆಚ್ಚುಗೆ ವ್ಯಕ್ತವಾಗಿದೆ.

ಕಾರ್ಯಕ್ರಮದಲ್ಲಿ ಪಿ. ಸಿದ್ದೇಶ್, ಟಿ. ಗುರುಬಸವರಾಜ, ಪಿ. ಕೊಟ್ರೇಶ್, ಸಂಗಮೇಶ್ ಐ.ಎಂ, ಅಜಯ ಎ, ಯದುವೀರ್ ಎಂ.ಎಂ, ಜಿ. ಶಿವಲಿಂಗೇಶ್, ಲೋಕೇಶ್, ಶಿವರಾಜ್, ಮಾರುತಿ, ಚಂದ್ರು ಎಸ್. ಎಸ್, ಶಶಿಕುಮಾರ್, ಕೊಟ್ರಯ್ಯ ಎಚ್.ಎಂ, ಅಬ್ದುಲ್ ರಹಿಮಾನ್, ಈಶ್ವರಪ್ಪ ಎಚ್, ಕೊಟ್ರಪ್ಪ ಎಚ್, ವೀರೇಶ್ ಜಿ, ವಿಠೋಬಪ್ಪ ಕೆ, ಇಂತಿಯಾಜ್ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಟ್ರಸ್ಟ್‌ನ ಕಾರ್ಯದರ್ಶಿ ವಿನಾಯಕ ಎಂ.ಎಂ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ಬೇಸಿಗೆ ಸಂಕಷ್ಟ ತಡೆಗೆ ನೀರು ಸಂರಕ್ಷಣೆ ಕಡ್ಡಾಯ

### ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಕ್ರಮಕ್ಕೆ ಅಧಿಕಾರಿಗಳಿಗೆ ತಹಸೀಲ್ದಾರ್ ಆರ್. ಕವಿತಾ ಸೂಚನೆ

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಾಲೂಕಿನ ಜನರು ಹಾಗೂ ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕೆಂದು ತಹಸೀಲ್ದಾರ್ ಆರ್. ಕವಿತಾ ಅವರು ಅಧಿಕಾರಿಗಳಿಗೆ ಸೂಚಿಸಿದರು.

ತಾಲ್ಲೂಕು ಆಡಳಿತ ಸೌಧದಲ್ಲಿ ನಡೆದ ತಾಲೂಕು ಮಟ್ಟದ ಅಧಿಕಾರಿಗಳ ಸಭೆಯಲ್ಲಿ ಮಾತನಾಡಿದ ಅವರು, ಬೇಸಿಗೆಯ ತಾಪಮಾನ ಹಾಗೂ ಗಾಳಿಯ ತೀವ್ರತೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಸಾರ್ವಜನಿಕರು ಅನಾವಶ್ಯಕವಾಗಿ ಮಧ್ಯಾಹ್ನ 12ರಿಂದ 4ರ ವರೆಗೆ ಹೊರಗೆ ಬಾರದಂತೆ ಗ್ರಾಮ ಪಂಚಾಯಿತಿ ಅಧಿಕಾರಿಗಳು ಜಾಗೃತಿ ಮೂಡಿಸಬೇಕೆಂದು ತಿಳಿಸಿದರು.



ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಜೆಇ ನಂದೀಶ್ ಮಾತನಾಡಿ, ತಾಲೂಕಿನ ಬಾಚಿಕೊಂಡನಹಳ್ಳಿ-1, ಸೀಗೇನಹಳ್ಳಿ-3, ಹಂಪಸಾಗರ-2, ಕೆಕೆ ತಾಂಡ, ಕಿತ್ನೂರು ಸೇರಿದಂತೆ ಕೆಲವು ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗಿದ್ದು, ಅಲ್ಲಿ ಖಾಸಗಿ ಕೊಳವೆಬಾವಿಗಳಿಂದ ನೀರು ಸರಬರಾಜು ಮಾಡಲಾಗುತ್ತಿದೆ ಎಂದು ಮಾಹಿತಿ ನೀಡಿದರು.

ಪಶುಸಂಗೋಪನೆ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಸೂರಪ್ಪ ಪೂಜಾರ್ ಮಾತನಾಡಿ, ತಾಲೂಕಿನಲ್ಲಿ ಜಾನುವಾರುಗಳಿಗೆ ಮೇವಿನ ಕೊರತೆ ಇಲ್ಲದೆ ಸುಮಾರು 66 ವಾರಗಳಿಗೆ ಸಾಕಾಗುವಷ್ಟು ಮೇವಿನ ಸಂಗ್ರಹವಿದ್ದು, ಮುಂಜಾಗ್ರತಾ ಕ್ರಮವಾಗಿ ಲಸಿಕೆ ನೀಡಲಾಗಿದೆ ಎಂದು ತಿಳಿಸಿದರು. ಪಟ್ಟಣದ 23 ವಾರ್ಡುಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಇಲ್ಲವೆಂದು ಪುರಸಭೆಯ ಮುಖ್ಯಾಧಿಕಾರಿ ಎಂ.ಕೆ. ಮುಗುಳಿ ತಿಳಿಸಿ, ಬಿಸಿಲಿನ ತಾಪಮಾನ ಹೆಚ್ಚುತ್ತಿರುವ ಕುರಿತು ಪ್ರತಿದಿನ ಕಸ ಸಂಗ್ರಹ ವಾಹನಗಳ ಮೂಲಕ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ ಎಂದರು.

ಸಭೆಯಲ್ಲಿ ತಾ.ಪಂ. ಇಒ ಪಾಲಯ್ಯನ ಕೋಟೆ ವಿಶ್ವನಾಥ್, ಉಪ ತಹಸೀಲ್ದಾರ್ ಶಿವಕುಮಾರ್ ಗೌಡ್ರು, ಪ್ರಭಾರಿ ಬಿಇಒ ಎಂ.ಎಸ್. ಪ್ರಭಾಕರ್, ಸಮಾಜ ಕಲ್ಯಾಣ ಇಲಾಖೆ ನಿರ್ದೇಶಕ ಜಗದೀಶ್, ತೋಟಗಾರಿಕೆ ಇಲಾಖೆ ಸಹಾಯಕ ನಿರ್ದೇಶಕ ವಿಜಯ್ ನಿಚ್ಚಾಪುರ, ಬಿಸಿಎಂ ಅಧಿಕಾರಿ ಕೊಟ್ರೇಶ್ ನಾಯ್ಕ ಹಾಗೂ ಅಕ್ಷರ ದಾಸೋಹ ಅಧಿಕಾರಿ ರಾಜಕುಮಾರ್ ನಾಯ್ಕ ಉಪಸ್ಥಿತರಿದ್ದರು.

# ಸ್ವಯಂ ಸೇವೆ ಮಾಡಿದ ವಿದ್ಯಾರ್ಥಿಗಳಿಗೆ ಅಭಿನಂದನೆ



■ **ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ, ಕನೆಕ್ಟ್ ಸಂಸ್ಥೆ ಧಾರವಾಡ ಹಾಗೂ ಜಗದ್ಗುರು ತೋಂಟ-ದಾರ್ಯ ವಿದ್ಯಾಪೀಠದ ಬಸವೇಶ್ವರ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದ ಸಂಯುಕ್ತ ಆಶ್ರಯದಲ್ಲಿ ಏಪ್ರಿಲ್ 11ರಂದು ಗದಗ ನಗರದಲ್ಲಿ ಬೃಹತ್ ಉದ್ಯೋಗ ಮೇಳವನ್ನು ಯಶಸ್ವಿಯಾಗಿ ಆಯೋಜಿಸಲಾಗಿತ್ತು.

ಈ ಉದ್ಯೋಗ ಮೇಳದಲ್ಲಿ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಹಾಗೂ ವಿದ್ಯಾರ್ಥಿನಿಯರು ಸಕ್ರಿಯವಾಗಿ ಪಾಲ್ಗೊಂಡು ಅಚ್ಚುಕಟ್ಟಾಗಿ ಕಾರ್ಯಕ್ರಮವನ್ನು ನಡೆಸಿಕೊಡುವ ಮೂಲಕ ಸ್ವಯಂಸೇವಾ ಸೇವೆ ಸಲ್ಲಿಸಿದ್ದರು. ಈ ಹಿನ್ನೆಲೆಯಲ್ಲಿ ಅವರಿಗೆ ಅಭಿನಂದನಾ ಕಾರ್ಯಕ್ರಮವನ್ನು ಆಯೋಜಿಸಿ, ವಿದ್ಯಾರ್ಥಿಗಳ ಸೇವೆಯನ್ನು ಶ್ಲಾಘಿಸಲಾಯಿತು.

ಕಾರ್ಯಕ್ರಮದಲ್ಲಿ ಜಗದ್ಗುರು ತೋಂಟದಾರ್ಯ ವಿದ್ಯಾಪೀಠದ ಕಾರ್ಯದರ್ಶಿ ಶಿವಾನಂದ ಎಸ್. ಪಟ್ಟಣಶೆಟ್ಟಿ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ಜೊತೆಗೆ ಸ್ವಯಂಸೇವಕರಾಗಿ ಸೇವೆ ಸಲ್ಲಿಸಿದ ವಿದ್ಯಾರ್ಥಿಗಳಿಗೆ ಅಭಿನಂದನಾ ಪತ್ರಗಳನ್ನು ನೀಡಿ ಪ್ರಶಂಸಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಸ್ಥೆಯ ಅಧ್ಯಕ್ಷ ಶರಣಬಸಪ್ಪ ಸಂಗಪ್ಪ ಗುಡಿಮನಿ ವಹಿಸಿದ್ದರು. ಈ ಸಂದರ್ಭದಲ್ಲಿ ಉಪಾಧ್ಯಕ್ಷ ಜಯದೇವ ಎಂ. ಮೆಣಸಗಿ, ಪ್ರಕಾಶ ಎಸ್. ಉಗಲಾಟದ, ಸಿದ್ರಾಮಪ್ಪ ಎ. ಉಮಚಗಿ, ಸಹ ಗೌರವ ಕಾರ್ಯದರ್ಶಿ ರಾಘವೇಂದ್ರ ಎಸ್. ಕಾಲವಾಡ, ಅಶೋಕ ಎಸ್. ಸಂಕಣ್ಣವರ, ಕೋಶಾಧ್ಯಕ್ಷ ಅರವಿಂದ ಎಸ್. ಕಾಮತ ಹಾಗೂ ಮಹಾವಿದ್ಯಾಲಯದ ಪ್ರಾಚಾರ್ಯ ಎಂ.ಎನ್. ಬುರಡಿ ಉಪಸ್ಥಿತರಿದ್ದರು.

# ಹಾಸ್ಟೆಲ್ ವಿದ್ಯಾರ್ಥಿಗಳಿಂದ ಪಿಯುಸಿ ಪರೀಕ್ಷೆಯಲ್ಲಿ ಗಮನಾರ್ಹ ಸಾಧನೆ

## ಶಿಸ್ತಿನ ಜೀವನಶೈಲಿ ಮತ್ತು ಅಧ್ಯಯನ ವಾತಾವರಣದಿಂದ ಶೇ.91 ಒಟ್ಟು ಫಲಿತಾಂಶ





"ವಿದ್ಯಾರ್ಥಿಗಳ ಶಿಸ್ತಿನ ಜೀವನಶೈಲಿ ಹಾಗೂ ಸ್ಪರ್ಧಾತ್ಮಕ ವಾತಾವರಣವೇ ಹಾಸ್ಟೆಲ್ ವಿದ್ಯಾರ್ಥಿಗಳ ಸಾಧನೆಗೆ ಪ್ರಮುಖ ಕಾರಣವಾಗಿದೆ. ಮುಂದಿನ ದಿನಗಳಲ್ಲಿ ಇನ್ನಷ್ಟು ಉತ್ತಮ ಫಲಿತಾಂಶ ಸಾಧಿಸಲು ಕ್ರಮ ಕೈಗೊಳ್ಳಲಾಗುವುದು."

– **ಬಸವರಾಜ ಬಳ್ಳಾರಿ,** ಬಿಸಿಎಂ ಅಧಿಕಾರಿ.

ಮನೆಯಲ್ಲಿರುವ ಟಿವಿ, ಮೊಬೈಲ್ ಮುಂತಾದ ಅಲೆಮಾರಿ ಸೌಲಭ್ಯಗಳ ಕೊರತೆಯಿಂದ ಹಾಸ್ಟೆಲ್ ವಿದ್ಯಾರ್ಥಿಗಳು ಓದಿನ ಮೇಲೆ ಹೆಚ್ಚು ಏಕಾಗ್ರತೆ ಸಾಧಿಸುತ್ತಿದ್ದಾರೆ. ಜೊತೆಗೆ ಅಧ್ಯಯನ ಕೊಠಡಿಗಳು, ಗ್ರಂಥಾಲಯ, ಶಿಕ್ಷಕರ ಮಾರ್ಗದರ್ಶನ ಹಾಗೂ ಸ್ಪರ್ಧಾತ್ಮಕ ವಾತಾವರಣದಿಂದ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡುತ್ತಿದ್ದಾರೆ.

■ **ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯದಲ್ಲಿ ಇತ್ತೀಚೆಗೆ ಪ್ರಕಟವಾದ ದ್ವಿತೀಯ ಪಿಯುಸಿ ಫಲಿತಾಂಶದಲ್ಲಿ ಹಾಸ್ಟೆಲ್‌ನಲ್ಲಿ ವಾಸಿಸುವ ವಿದ್ಯಾರ್ಥಿಗಳು ಗಮನಾರ್ಹ ಸಾಧನೆ ಮಾಡಿದ್ದು, ಟಾಪರ್ ಪಟ್ಟಿಯಲ್ಲಿ ಹೆಚ್ಚಿನವರು ಹಾಸ್ಟೆಲ್ ವಿದ್ಯಾರ್ಥಿಗಳೇ ಕಾಣಿಸಿಕೊಂಡಿದ್ದಾರೆ. ಗದಗ ಜಿಲ್ಲೆಯಲ್ಲಿ ಸಹ ಇದೇ ಧೋರಣೆ ಮುಂದುವರಿದಿದೆ.

ಗದಗ ತಾಲೂಕಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಸತಿ ನಿಲಯಗಳಲ್ಲಿ ವಾಸಿಸುವ ವಿದ್ಯಾರ್ಥಿಗಳು ಈ ಬಾರಿ ಉತ್ತಮ ಫಲಿತಾಂಶ ಸಾಧಿಸಿ ಜಿಲ್ಲೆಯ ಗಮನ ಸೆಳೆದಿದ್ದಾರೆ. ಹಾಸ್ಟೆಲ್ ಜೀವನವು ವಿದ್ಯಾರ್ಥಿಗಳಿಗೆ ನಿಯಮಿತ ದಿನಚರಿ, ಶಿಸ್ತಿನ ಬದುಕು ಹಾಗೂ ಅಧ್ಯಯನಕ್ಕೆ ಸೂಕ್ತ ವಾತಾವರಣ ಒದಗಿಸುತ್ತಿದೆ.

ತಾಲೂಕಿನಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಬಾಲಕಿಯರ ನಾಲ್ಕು ಹಾಗೂ ಬಾಲಕರ ಮೂರು ವಸತಿ ನಿಲಯಗಳಿದ್ದು, ಈ ವಸತಿ ನಿಲಯಗಳಲ್ಲಿ ಓದುತ್ತಿರುವ ಬಾಲಕರ ಸಾಧನೆ ಶೇ.87 ಹಾಗೂ ಬಾಲಕಿಯರ ಸಾಧನೆ ಶೇ.92 ಆಗಿದೆ. 2025–26ನೇ ಸಾಲಿನ ಫಲಿತಾಂಶದಲ್ಲಿ ತಾಲೂಕಿನ ಏಳು ಬಿಸಿಎಂ ವಿದ್ಯಾರ್ಥಿ ನಿಲಯಗಳ ಒಟ್ಟಾರೆ ಫಲಿತಾಂಶ ಶೇ.91 ದಾಖಲಾಗಿದ್ದು ಪ್ರಶಂಸೆಗೆ ಪಾತ್ರವಾಗಿದೆ.

ಸುಮಾರು 300 ಪಿಯುಸಿ ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, ಅವರಲ್ಲಿ 42 ವಿದ್ಯಾರ್ಥಿಗಳು ಶೇ.90ಕ್ಕಿಂತ ಹೆಚ್ಚು, 79 ವಿದ್ಯಾರ್ಥಿಗಳು ಶೇ.85ಕ್ಕಿಂತ ಹೆಚ್ಚು ಹಾಗೂ 60 ವಿದ್ಯಾರ್ಥಿಗಳು ಶೇ.60ಕ್ಕಿಂತ ಹೆಚ್ಚು ಅಂಕಗಳನ್ನು ಪಡೆದಿದ್ದಾರೆ. ಕಲಾ ವಿಭಾಗದಲ್ಲಿ ಹಾತಲಗೇರಿ ಗ್ರಾಮದ ಕರಿಯಪ್ಪ ಕುರಬರ ಹಾಗೂ ವಾಣಿಜ್ಯ ವಿಭಾಗದ ವಿನೋದ ಕುಡಗಿ ಶೇ.95.83 ಅಂಕಗಳೊಂದಿಗೆ ಪ್ರಥಮ ಸ್ಥಾನ ಪಡೆದಿದ್ದಾರೆ. ಗಾಯತ್ರಿ ಆರೇರ ಶೇ.95.67 ಅಂಕಗಳೊಂದಿಗೆ ದ್ವಿತೀಯ ಸ್ಥಾನ ಪಡೆದಿದ್ದಾರೆ. ಒಟ್ಟು 45 ವಿದ್ಯಾರ್ಥಿಗಳು ಶೇ.90ಕ್ಕಿಂತ ಹೆಚ್ಚು ಅಂಕ ಗಳಿಸಿರುವುದು ವಿಶೇಷವಾಗಿದೆ.

# ಮಹಿಳಾ ಸಬಲೀಕರಣದ ದಿಕ್ಕಿನಲ್ಲಿ ಐತಿಹಾಸಿಕ ಹೆಜ್ಜೆ

■ **ವಿಜಯಸಾಕ್ಷಿ ಸುದ್ದಿ, ಗದಗ**

ದೇಶದ ಮಹಿಳೆಯರ ಸಬಲೀಕರಣ, ಗೌರವ ಮತ್ತು ರಾಜಕೀಯ ಪ್ರತಿನಿಧಿತ್ವವನ್ನು ಹೆಚ್ಚಿಸುವ ಮಹತ್ವಾಕಾಂಕ್ಷಿ ದೃಷ್ಟಿಕೋಣದೊಂದಿಗೆ ಕೇಂದ್ರ ಸರ್ಕಾರ ಜಾರಿಗೆ ತಂದಿರುವ "ನಾರಿ ಶಕ್ತಿ ವಂದನ್ ಅಧಿನಿಯಮ್-2026" ದೇಶದ ಇತಿಹಾಸದಲ್ಲೇ ಒಂದು ಸುವರ್ಣ ಅಧ್ಯಾಯವಾಗಲಿದೆ ಎಂದು ಮಹಿಳಾ ಮೋರ್ಚಾ ಜಿಲ್ಲಾ ಅಧ್ಯಕ್ಷೆ ಶ್ರೀಮತಿ ನರಮಲಾ ಕೊಳ್ಳಿ ಹೇಳಿದ್ದಾರೆ.

ಈ ಅಧಿನಿಯಮವು ಮಹಿಳೆಯರಿಗೆ ರಾಜಕೀಯ ಕ್ಷೇತ್ರದಲ್ಲಿ ಹೆಚ್ಚಿನ ಅವಕಾಶಗಳನ್ನು ಒದಗಿಸುವ ಮೂಲಕ ಸಮಾನ ಹಕ್ಕುಗಳು ಮತ್ತು ಅವಕಾಶಗಳನ್ನು ಖಚಿತಪಡಿಸುವ ದಿಕ್ಕಿನಲ್ಲಿ ಮಹತ್ವದ ಹೆಜ್ಜೆಯಾಗಿದೆ. ಬಹುಕಾಲದಿಂದ ಮಹಿಳೆಯರು ಎದುರಿಸುತ್ತಿದ್ದ ಪ್ರತಿನಿಧಿತ್ವದ ಕೊರತೆಯನ್ನು



ನಿವಾರಿಸುವ ಉದ್ದೇಶದಿಂದ ಈ ಐತಿಹಾಸಿಕ ನಿರ್ಧಾರ ಕೈಗೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

ತಮ್ಮ ಪ್ರಕಟಣೆಯಲ್ಲಿ ಅವರು, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ ಮಹಿಳೆಯರಿಗಾಗಿ ಹಲವು ಕಲ್ಯಾಣಕಾರಿ ಯೋಜನೆಗಳು ಜಾ-ರಿಯಾಗಿದ್ದು, ಇದೀಗ "ನಾರಿ ಶಕ್ತಿ ವಂದನ್ ಅಧಿನಿಯಮ್-2026" ಮೂಲಕ ಮಹಿಳೆಯರಿಗೆ ಹೊಸ ಆಶಾಕಿರಣ ಮೂಡಿಸಲಾಗಿದೆ ಎಂದು ಹೇಳಿದ್ದಾರೆ.

ಗ್ರಾಮೀಣದಿಂದ ನಗರ ಮಟ್ಟದವರೆಗೆ ಮಹಿಳೆಯರಿಗೆ ರಾಜಕೀಯವಾಗಿ ಸಕ್ರಿಯವಾಗುವ ಅವಕಾಶಗಳನ್ನು ಹೆಚ್ಚಿಸುವುದರ ಜೊತೆಗೆ ಮುಂದಿನ ಪೀಳಿಗೆಗೆ ಇದು ಪ್ರೇರಣೆಯಾಗಲಿದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

ಮಹಿಳಾ ಮೋರ್ಚಾ ವತಿಯಿಂದ ಈ ಐತಿಹಾಸಿಕ ನಿರ್ಧಾರವನ್ನು ಸ್ವಾಗತಿಸಿ, ಪ್ರಧಾನಮಂತ್ರಿಗಳಿಗೆ ಧನ್ಯವಾದಗಳನ್ನು ಸಲ್ಲಿಸಿರುವುದಾಗಿ ತಿಳಿಸಿದ್ದಾರೆ. ಈ ಅಧಿನಿಯಮದ ಮೂಲಕ ಮಹಿಳೆಯರ ರಾಜಕೀಯ ಸಬಲೀಕರಣ ಮತ್ತಷ್ಟು ಬಲಪಡಲಿದ್ದು, ಭಾರತವು ಮಹಿಳಾ ನಾಯಕತ್ವದಲ್ಲಿ ವಿಶ್ವಕ್ಕೆ ಮಾದರಿಯಾಗಲಿದೆ ಎಂಬ ವಿಶ್ವಾಸವನ್ನು ವ್ಯಕ್ತಪಡಿಸಿದ್ದಾರೆ.

# ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಎಐ ಕಾರ್ಯಾಗಾರ ಆಯೋಜನೆ

## ಡಿಜಿಟಲ್ ಕೌಶಲ್ಯ ವೃದ್ಧಿ ಮತ್ತು ಭವಿಷ್ಯದ ತಂತ್ರಜ್ಞಾನ ಅರಿವಿಗೆ ವೇದಿಕೆ

G-NTTF®
Securing your Future with your own Hands

■ **ವಿಜಯಸಾಕ್ಷಿ ಸುದ್ದಿ, ಗದಗ**

ಇಂದಿನ ಡಿಜಿಟಲ್ ಯುಗದಲ್ಲಿ ಕೃತಕ ಬುದ್ಧಿಮತ್ತೆ (ಎಐ) ಕುರಿತು ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಲು ಗದಗದಲ್ಲಿರುವ ನೆಟ್ಟೂರು ಟೆಕ್ನಿಕಲ್ ಟ್ರೈನಿಂಗ್ ಫೌಂಡೇಶನ್ (GNTTF) ವತಿಯಿಂದ ವಿಶೇಷ ಕಾರ್ಯಾಗಾರ ಆಯೋಜಿಸಲಾಗಿದೆ.

ಏಪ್ರಿಲ್ 17 ಮತ್ತು 18ರಂದು ಬೆಳಿಗ್ಗೆ 9 ಗಂಟೆಯಿಂದ ಆರಂಭವಾಗುವ ಈ ಕಾರ್ಯಾಗಾರವು ಪ್ರತಿದಿನ ನಾಲ್ಕು ಗಂಟೆಗಳ ಅವಧಿಯಲ್ಲಿ ನಡೆಯಲಿದೆ. ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳನ್ನು ಗಮನದಲ್ಲಿಟ್ಟುಕೊಂಡು ರೂಪಿಸಲಾದ ಈ ಕಾರ್ಯಕ್ರಮದಲ್ಲಿ ನವೀನ ಡಿಜಿಟಲ್ ತಂತ್ರಜ್ಞಾನಗಳ ಪರಿಚಯ ನೀಡಲಾಗುತ್ತದೆ.

ಕಾರ್ಯಾಗಾರದಲ್ಲಿ ಕೃತಕ ಬುದ್ಧಿಮತ್ತೆಯ ಮೂಲಭೂತ ತತ್ವಗಳು, ಎಐ ಆಧಾರಿತ ವಿಡಿಯೋ ತಯಾರಿಕಾ ಸಾಧನಗಳ ಪ್ರಾಯೋಗಿಕ ತರಬೇತಿ, ಸೃಜನಶೀಲತೆ ಮತ್ತು ಕಲಿಕೆಯಿಗಾಗಿ ಎಐ ಉಪಕರಣಗಳ ಪರಿಣಾಮಕಾರಿ ಬಳಕೆ ಸೇರಿದಂತೆ ಹಲವಾರು ವಿಷಯಗಳನ್ನು ಒಳಗೊಂಡಿರುತ್ತವೆ. ಜೊತೆಗೆ, ಚಾಟ್‌ಜಿಪಿಟಿ ಬಳಸಿ ಪ್ರಾಂಪ್ಟಿಂಗ್ ತಂತ್ರಗಳ ಕುರಿತು ವಿಶೇಷ ಅಧಿವೇಶನಗಳೂ ನಡೆಯಲಿವೆ.

"ವಿದ್ಯಾರ್ಥಿಗಳಲ್ಲಿ ಎಐ ಬಗ್ಗೆ ಪ್ರಾಥಮಿಕ ಅರಿವು ಮೂಡಿಸಿ, ಸೃಜನಶೀಲತೆ ಮತ್ತು ನವೀನ ಚಿಂತನೆಗೆ ಉತ್ತೇಜನ ನೀಡುವುದು ಕಾರ್ಯಾಗಾರದ ಪ್ರಮುಖ ಉದ್ದೇಶ" ಎಂದು ಸಂಸ್ಥೆ ತಿಳಿಸಿದೆ.

ಈ ಕಾರ್ಯಕ್ರಮದ ಮೂಲಕ ವಿದ್ಯಾರ್ಥಿಗಳು ಎಐ ಪ್ಲಾಟ್‌ಫಾರ್ಮ್‌ಗಳ ಸಹಾಯದಿಂದ ವಿಡಿಯೋಗಳನ್ನು ರಚಿಸುವುದು, ತಮ್ಮ ಸಂವಹನ ಹಾಗೂ ಡಿಜಿಟಲ್ ಕೌಶಲ್ಯಗಳನ್ನು ಅಭಿವೃದ್ಧಿಪಡಿಸುವುದು ಮತ್ತು ಎಐಯ ನೈಜ ಜೀವನದ ಬಳಕೆಗಳನ್ನು ಅರಿಯುವ ಅವಕಾಶ ಪಡೆಯಲಿದ್ದಾರೆ.

GNTT ಈನ ತರಬೇತುದಾರರು ಮತ್ತು ಉದ್ಯಮ ತಜ್ಞರು ಕಾರ್ಯಾಗಾರವನ್ನು ನಡೆಸಲಿದ್ದು, ಭಾಗವಹಿಸುವ ಎಲ್ಲಾ ವಿದ್ಯಾರ್ಥಿಗಳಿಗೆ ಪ್ರಮಾಣಪತ್ರಗಳನ್ನು ನೀಡಲಾಗುತ್ತದೆ. ಭಾಗವಹಿಸುವವರು ನೋಟ್‌ಬುಕ್, ಪೆನ್, ಪೆನ್ಸಿಲ್ ಸೇರಿದಂತೆ ಅಗತ್ಯ ಸ್ಟೇಷನರಿ ಸಾಮಗ್ರಿಗಳ ಜೊತೆಗೆ ಪ್ರಾಯೋಗಿಕ ತರಬೇತಿಗಾಗಿ ಸ್ಮಾರ್ಟ್‌ಫೋನ್ ತರಬೇಕೆಂದು ಸಂಘಟಕರು ವಿನಂತಿಸಿದ್ದಾರೆ.

# ಇಂದು ವಿದ್ಯುತ್ ಸಮಸ್ಯೆ ಪರಿಹಾರಕ್ಕೆ ವಿದ್ಯುತ್ ಅದಾಲತ್

## ಪ್ರತಿ ತಿಂಗಳ 3ನೇ ಶನಿವಾರ ಗ್ರಾಹಕರ ದೂರುಗಳಿಗೆ ಸ್ಥಳದಲ್ಲೇ ಪರಿಹಾರ

■ **ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯ ಶಹರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಉಂಟಾಗುತ್ತಿರುವ ವಿದ್ಯುತ್ ಸಮಸ್ಯೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ ವಿದ್ಯುತ್ ಅದಾಲತ್ ನಡೆಸಲು ನಿರ್ಧರಿಸಲಾಗಿದೆ.

ಸರ್ಕಾರದ ಆದೇಶದಂತೆ ಪ್ರತಿ ತಿಂಗಳ ಮೂರನೇ ಶನಿವಾರ ಸಹಾಯಕ ಕಾರ್ಯಪಾಲಕ ಅಭಿಯಂತರರ ನೇತೃತ್ವದಲ್ಲಿ ಗದಗ ಶಹರ, ಗದಗ ಗ್ರಾಮೀಣ, ಮುಂಡರಗಿ ಹಾಗೂ ಲಕ್ಷ್ಮೇಶ್ವರ ಕಾರ್ಯ ಮತ್ತು ಪಾಲನೆ ಉಪವಿಭಾಗಗಳಲ್ಲಿ ವಿದ್ಯುತ್ ಅದಾಲತ್ ಆಯೋಜಿಸಲಾಗುತ್ತದೆ.

ಈ ಹಿನ್ನೆಲೆಯಲ್ಲಿ ಏಪ್ರಿಲ್ 18, 2026ರಂದು ಮಧ್ಯಾಹ್ನ 3.00 ಗಂಟೆಗೆ ವಿದ್ಯುತ್ ಅದಾಲತ್ ನಡೆಯಲಿದೆ. ಮುಂಡರಗಿ ಉಪವಿಭಾಗದಲ್ಲಿ ಅಧೀಕ್ಷಕ ಇಂಜಿನೀಯರ್ (ವಿ), ಕಾರ್ಯ ಮತ್ತು ಪಾಲನೆ ವೃತ್ತ, ಹುವಿಸಕಂನಿ., ಗದಗ ಅವರ ಅಧ್ಯಕ್ಷತೆಯಲ್ಲಿ ಕಾರ್ಯಕ್ರಮ ನಡೆಯಲಿದೆ.

ವಿದ್ಯುತ್ ಅದಾಲತ್‌ನಲ್ಲಿ ಗ್ರಾಹಕರ ಸಮಸ್ಯೆಗಳಿಗೆ ಸ್ಥಳದಲ್ಲಿಯೇ ಪರಿಹಾರ ನೀಡಲು ಕ್ರಮ ಕೈಗೊಳ್ಳಲಾಗುತ್ತದೆ. ಸಾರ್ವಜನಿಕರು ಈ ಅವಕಾಶವನ್ನು ಬಳಸಿಕೊಂಡು ತಮ್ಮ ವಿದ್ಯುತ್ ಸಂಬಂಧಿತ ಸಮಸ್ಯೆಗಳನ್ನು ಪರಿಹರಿಸಿಕೊಳ್ಳುವಂತೆ ಕೋರಲಾಗಿದೆ.

## ಮುಂಗಡ ದಾಸ್ತಾನು ತಪ್ಪಿಸಿ, ಅಗತ್ಯಕ್ಕೆ ತಕ್ಕಂತೆ ಮಾತ್ರ ಖರೀದಿಸಲು ರೈತರಿಗೆ ಸೂಚನೆ

# ರಸಗೊಬ್ಬರ ಖರೀದಿಯಲ್ಲಿ ಆತಂಕ ಬೇಡ

■ **ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಲ್ಲಿ ಇನ್ನೂ ಮಳೆಗಾಲ ಪ್ರಾರಂಭವಾಗಿಲ್ಲದೆ ಕೃಷಿ ಚಟುವಟಿಕೆಗಳು ಆರಂಭವಾಗದಿದ್ದರೂ, ರಸಗೊಬ್ಬರ ಕೊರತೆ ಉಂಟಾಗಬಹುದು ಎಂಬ ಆತಂಕದಿಂದ ರೈತರು ಮುಂಗಡವಾಗಿ ರಸಗೊಬ್ಬರಗಳನ್ನು ಖರೀದಿಸಿ ದಾಸ್ತಾನು ಮಾಡುವ ಪ್ರವೃತ್ತಿ ಹೆಚ್ಚುತ್ತಿದೆ ಎಂದು ಕೃಷಿ ಇಲಾಖೆ ತಿಳಿಸಿದೆ.

ಇಂತಹ ಮುಂಗಡ ಖರೀದಿ ಕ್ರಮದಿಂದ ರಸಗೊಬ್ಬರ ಮಾರಾಟಗಾರರು ಕೃತಕ ಅಭಾವ ಸೃಷ್ಟಿಸಿ ಹೆಚ್ಚಿನ ದರಕ್ಕೆ ಮಾರಾಟ ಮಾಡಲು ಅವಕಾಶ ಸಿಗುವ ಸಾಧ್ಯತೆ ಇರುವುದರಿಂದ ರೈತರು ಅನಗತ್ಯ ಆತಂಕ ಪಡುವ ಅಗತ್ಯವಿಲ್ಲ ಎಂದು ಇಲಾಖೆ ಸ್ಪಷ್ಟಪಡಿಸಿದೆ.

ಜಿಲ್ಲೆಯ ಬೇಡಿಕೆ ಅನುಸಾರ ರಸಗೊಬ್ಬರಗಳ ಸಮರ್ಪಕ ಸರಬರಾಜು ನಡೆಯುತ್ತಿದ್ದು, ರೈತರು ಅಗತ್ಯಕ್ಕಿಂತ ಹೆಚ್ಚು ಹಾಗೂ ಮುಂಚಿತವಾಗಿ ಖರೀದಿ ಮಾಡಿ ದಾಸ್ತಾನು ಮಾಡುವ ಅವಶ್ಯಕತೆ ಇಲ್ಲ. ಕೃಷಿ ಚಟುವಟಿಕೆಗಳು ಪ್ರಾರಂಭವಾದ ನಂತರ ಭೂಮಿಯ ಪ್ರಮಾಣ, ಬೆಳೆಯ ವಿಧ, ಬೆಳವಣಿಗೆ ಹಂತ ಹಾಗೂ ಶಿಫಾರಸ್ಸು ಪ್ರಮಾಣಗಳನ್ನು ಗಮನದಲ್ಲಿಟ್ಟುಕೊಂಡು ಮಾತ್ರ ರಸಗೊಬ್ಬರ ಖರೀದಿಸಬೇಕು ಎಂದು ತಿಳಿಸಲಾಗಿದೆ.

ನಿಗದಿತ ದರಕ್ಕಿಂತ ಹೆಚ್ಚಿನ ದರಕ್ಕೆ ರಸಗೊಬ್ಬರ ಮಾರಾಟ ಮಾಡುವುದು ಅಥವಾ ಅಧಿಕೃತ ಪರವಾನಗಿ ಇಲ್ಲದೇ ಮಾರಾಟ ನಡೆಸುವುದು ಕಂಡುಬಂದಲ್ಲಿ ರಸಗೊಬ್ಬರ ನಿಯಂತ್ರಣ ಕಾಯ್ದೆ (ಈಅಔ) 1985ರ ಪ್ರಕಾರ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಲಾಗಿದೆ.

ಕೃಷಿ ಪರಿಕರ ಮಾರಾಟಗಾರರು ರೈತರೊಂದಿಗೆ ಸೌಜನ್ಯದಿಂದ ವರ್ತಿಸಬೇಕು. ಜೊತೆಗೆ ಕಔಖ ಯಂತ್ರದಲ್ಲಿನ ದಾಖಲೆಗಳು ಮತ್ತು ಗೋದಾಮಿನ ಭೌತಿಕ ದಾಸ್ತಾನುಗಳ ನಡುವೆ ಹೊಂದಾಣಿಕೆ ಇರಬೇಕು ಎಂದು ಸೂಚಿಸಲಾಗಿದೆ.

# ಕರ್ನಾಟಕ ಲೋಕಾಯುಕ್ತದ ನಾಲ್ಕು ದಶಕಗಳ ಸಾರ್ಥಕ ಪಯಣ

## ಇಂದು ವಿಧಾನಸೌಧದಲ್ಲಿ ವಿಶೇಷ ಕಾರ್ಯಕ್ರಮ; ಸಿಜೆಐ ಸೂರ್ಯ ಕಾಂತ್ ಉಪಸ್ಥಿತಿ

■ **ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಭ್ರಷ್ಟಾಚಾರ ನಿರ್ಮೂಲನೆ ಹಾಗೂ ಆಡಳಿತ ಸುಧಾರಣೆಯಲ್ಲಿ ಮಹತ್ವದ ಪಾತ್ರ ವಹಿಸಿರುವ ಕರ್ನಾಟಕ ಲೋಕಾಯುಕ್ತ ಸಂಸ್ಥೆ ತನ್ನ ಯಶಸ್ವಿ ನಾಲ್ಕು ದಶಕಗಳ ಪಯಣವನ್ನು ಪೂರ್ಣಗೊಳಿಸಿರುವ ಹಿನ್ನೆಲೆಯಲ್ಲಿ, ಏಪ್ರಿಲ್ 18, 2026ರಂದು ಬೆಂಗಳೂರಿನ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ವಿಶೇಷ ಕಾರ್ಯಕ್ರಮ ಆಯೋಜಿಸಲಾಗಿದೆ.

ಕಾರ್ಯಕ್ರಮಕ್ಕೆ ಭಾರತದ ಮುಖ್ಯ ನ್ಯಾಯಮೂರ್ತಿಗಳಾದ ಸೂರ್ಯ ಕಾಂತ್ ಅವರು ಮುಖ್ಯ ಅತಿಥಿಗಳಾಗಿ ಆಗಮಿಸಿ ಉದ್ಘಾಟನೆ ನೆರವೇರಿಸಲಿದ್ದಾರೆ. ಸುಪ್ರೀಂ ಕೋರ್ಟ್‌ನ ನ್ಯಾಯಮೂರ್ತಿಗಳಾದ ಅರವಿಂದ್ ಕುಮಾರ್ ಅವರು ಗೌರವ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ರಾಜ್ಯ ಲೋಕಾಯುಕ್ತರಾದ ಬಿ.ಎಸ್. ಪಾಟೀಲ್, ಉಪಲೋಕಾಯುಕ್ತರಾದ



ಕೆ.ಎನ್. ಫಣೀಂದ್ರ ಹಾಗೂ ಬಿ. ವೀರಪ್ಪ ಅವರ ಉಪಸ್ಥಿತಿಯಲ್ಲಿ ಕಾರ್ಯಕ್ರಮ ಜರುಗಲಿದೆ.

ಈ ಸಂದರ್ಭದಲ್ಲಿ ಲೋಕಾಯುಕ್ತ ನಿಯತಕಾಲಿಕೆಯನ್ನು ಬಿಡುಗಡೆ ಮಾಡುವ ಜೊತೆಗೆ ಚುನಾಯಿತ ಪ್ರತಿನಿಧಿಗಳ ಆಸ್ತಿ ಮತ್ತು ಹೊಣೆಗಾರಿಕೆಗಳ ಹೊಸ ಪೋರ್ಟಲ್ ಹಾಗೂ ಆನ್‌ಲೈನ್ ತನಿಖಾ ಮಾಡ್ಯೂಲ್‌ಗೆ ಚಾಲನೆ ನೀಡಲಾಗುತ್ತದೆ. ಇದೇ ವೇಳೆ ಮಾಜಿ ಲೋಕಾಯುಕ್ತರು ಮತ್ತು ಉಪಲೋಕಾಯುಕ್ತರನ್ನು ಸನ್ಮಾನಿಸಲಾಗುತ್ತದೆ.

ಸಭೆಯ ನಂತರ ಸಂಜೆ 4:30ರಿಂದ 6:00ರವರೆಗೆ ವಿಶೇಷ ವಿಚಾರಗೋಷ್ಠಿಗಳು ನಡೆಯಲಿದ್ದು, ಭ್ರಷ್ಟಾಚಾರ ವಿರುದ್ಧದ ಹೋರಾಟ, ಲೋಕಾಯುಕ್ತ ಕಾಯ್ದೆಯಡಿ ಕುಂದುಕೊರತೆಗಳ ಪರಿಹಾರ ಹಾಗೂ ಭ್ರಷ್ಟಾಚಾರ ತಡೆಗಟ್ಟುವ ಮಾರ್ಗಗಳ ಕುರಿತು ನಿವೃತ್ತ ನ್ಯಾಯಮೂರ್ತಿಗಳು ವಿಚಾರ ವಿನಿಮಯ ನಡೆಸಲಿದ್ದಾರೆ.

ಕರ್ನಾಟಕ ಲೋಕಾಯುಕ್ತವು ಕಳೆದ 40 ವರ್ಷಗಳಲ್ಲಿ ಹಲವು ಸವಾಲುಗಳನ್ನು ಎದುರಿಸಿದರೂ, ಸಾರ್ವಜನಿಕ ಸೇವೆಯಲ್ಲಿನ ಭ್ರಷ್ಟಾಚಾರ, ಸ್ವಜನಪಕ್ಷಪಾತ ಹಾಗೂ ಆಡಳಿತ ದುರುಪಯೋಗದ ವಿರುದ್ಧ ಸದಾ ದೃಢವಾಗಿ ಕಾರ್ಯನಿರ್ವಹಿಸಿದೆ. ಸಮಾಜದಲ್ಲಿ ಭ್ರಷ್ಟಾಚಾರ ಹೆಚ್ಚುತ್ತಿರುವುದು ಕಳವಳಕಾರಿ ಸಂಗತಿಯಾಗಿದ್ದರೂ, ಧನಾತ್ಮಕ ಚಿಂತನೆ ಮತ್ತು ಪರಿಶ್ರಮದಿಂದ ಅದನ್ನು ನಿಯಂತ್ರಿಸಬಹುದೆಂಬ ವಿಶ್ವಾಸವನ್ನು ಸಂಸ್ಥೆ ವ್ಯಕ್ತಪಡಿಸಿದೆ.

# ಈ ಬಾರಿ ಮಂತ್ರಿ ಪದವಿ ಖಚಿತವೇ?

▶▶ ಮೊದಲನೇ ಪುಟದಿಂದ

ಆಯ್ಕೆಯಾದ ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನ ನೀಡಬೇಕೆಂಬ ಒತ್ತಡ ಹೆಚ್ಚುತ್ತಿದೆ. ಇತ್ತೀಚೆಗೆ ನಡೆದ ಜಿ.ಎಸ್. ಪಾಟೀಲರ ಹುಟ್ಟುಹಬ್ಬದ ಸಂದರ್ಭದಲ್ಲಿ ಈ ವಿಷಯ ಮಾಧ್ಯಮಗಳಲ್ಲಿ ಪ್ರಸ್ತಾಪವಾಗಿದ್ದು, ಹಿರಿಯ ನಾಯಕರು ಗದಗ ಭಾಗದ ಜನರ ಬೇಡಿಕೆಯನ್ನು ಹೈಕಮಾಂಡ್ ಪರಿಗಣಿಸಬಹುದು ಎಂಬ ಸಂದೇಶ ನೀಡಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರು ರೋಣದಲ್ಲಿ ನಡೆದ ಕಾರ್ಯಕ್ರಮದ ವೇಳೆ ಅಭಿಮಾನಿಗಳ ಒತ್ತಾಯಕ್ಕೆ ಪ್ರತಿಕ್ರಿಯಿಸಿ, "ಯೋಗ್ಯ ಸಮಯದಲ್ಲಿ ಸಚಿವ ಸ್ಥಾನ ನೀಡುವ ವಿಚಾರ ಪರಿಗಣಿಸಲಾಗುತ್ತದೆ" ಎಂದು ಬಹಿರಂಗ ವೇದಿಕೆಯಲ್ಲಿ ಹೇಳಿದ್ದೂ ಈ ನಿರೀಕ್ಷೆಗಳಿಗೆ ಬಲ ನೀಡಿದೆ.

ಇನ್ನೊಂದೆಡೆ, ರೋಣ ಕ್ಷೇತ್ರದಿಂದ ನಾಲ್ಕು ಬಾರಿ ಗೆಲುವು ಸಾಧಿಸಿರುವ ಜಿ.ಎಸ್. ಪಾಟೀಲರು ಈ ಬಾರಿ ಸುಮಾರು 25 ಸಾವಿರ ಮತಗಳ ಅಂತರದಿಂದ ಗೆಲುವು ಸಾಧಿಸಿರುವುದು, ಅವರ ಹಿರಿತನ ಹಾಗೂ ಜನಮನ್ನಣೆ ಹೆಚ್ಚಿಸಿದೆ. ಆಶ್ಚರ್ಯವೆಂದರೆ, ಇಷ್ಟೊಂದು ದೊಡ್ಡ ಕ್ಷೇತ್ರವಾಗಿದ್ದರೂ ರೋಣ-ಕ್ಕೆ ಇಂದಿನವರೆಗೂ ಸಚಿವ ಸ್ಥಾನ ಸಿಕ್ಕಿಲ್ಲ ಎಂಬ ಅಸಮಾಧಾನವೂ ಸ್ಥಳೀಯರಲ್ಲಿ ವ್ಯಕ್ತವಾಗಿದೆ.

ಹೀಗಾಗಿ, ಈ ಬಾರಿ ರೋಣ ಕ್ಷೇತ್ರಕ್ಕೆ ಸಚಿವ ಸ್ಥಾನ ಸಿಗುವ ಸಾಧ್ಯತೆ ದಟ್ಟವಾಗಿದೆ ಎಂದು ರಾಜಕೀಯ ವಿಶ್ಲೇಷಕರು ಅಭಿಪ್ರಾಯಪಟ್ಟಿದ್ದಾರೆ. ದೆಹಲಿಯಲ್ಲಿ ಹೈಕಮಾಂಡ್ ನಾಯಕರನ್ನು ಭೇಟಿಯಾಗುತ್ತಿರುವ ಜಿ.ಎಸ್. ಪಾಟೀಲರು ಶತಾಯಗತಾಯ ಸಚಿವ ಸ್ಥಾನ ಪಡೆಯಲು ಪ್ರಯತ್ನಿಸುತ್ತಿದ್ದಾರೆ ಎನ್ನಲಾಗಿದೆ.

ಕಾಂಗ್ರೆಸ್ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರರೊಂದಿಗೆ ಆತ್ಮೀಯ ಸಂಪರ್ಕ ಹೊಂದಿರುವ ಜಿ.ಎಸ್. ಪಾಟೀಲರು ತಮ್ಮ ರಾಜಕೀಯ ಪ್ರಭಾವವನ್ನು ಬಳಸಿಕೊಂಡು ಅವಕಾಶ ಪಡೆಯುವ ವಿಶ್ವಾಸದಲ್ಲಿದ್ದಾರೆ.

# ನಿಧನ

## ಅಮನ್ ಕೊಡಗಲಿ



ಬಾಗಲಕೋಟೆ : ಜಿಲ್ಲೆಯ ಇಳಕಲ್ ಪಟ್ಟಣದ ಅಲಂಪುರ ಪೇಟೆಯ ನಿವಾಸಿ, ಹಾಯ್ ಮಿಂಚು ಪ್ರಾದೇಶಿಕ ದಿನ ಪತ್ರಿಕೆಯ ಸಂಪಾದಕ ಅಮನ್ ಕೊಡಗಲಿ (48) ಶುಕ್ರವಾರ ನಿಧನರಾದರು.

ಮೃತರಿಗೆ ಓರ್ವ ಪುತ್ರ, ಇಬ್ಬರು ಪುತ್ರಿಯರು, ಏಳು ಜನ ಅಣ್ಣ-ತಮ್ಮಂದಿರು ಸೇರಿದಂತೆ ಅಪಾರ ಬಂಧು-ಬಳಗವಿದೆ.

**ಸಂತಾಪ ಸೂಚನೆ :** ಕರ್ನಾಟಕ ಕಾರ್ಯನಿರತ ದಿನಪತ್ರಿಗಳ ಸಂಪಾದಕರ ಸಂಘದ ಜಿಲ್ಲಾ ಘಟಕದ ಸದಸ್ಯರು ಹಾಗೂ ಜಿಲ್ಲೆಯ ಹಿರಿಯ ಪತ್ರಕರ್ತರು ಅಮನ್ ಅವರ ನಿಧನಕ್ಕೆ ಸಂತಾಪ ಸೂಚಿಸಿದ್ದಾರೆ.

ಮೃತರ ಅಂತ್ಯಕ್ರಿಯೆಯು ಏ.18 ರಂದು ಬೆಳಗ್ಗೆ 10ಕ್ಕೆ ಇಳಕಲ್ ಪಟ್ಟಣದ ಖಬರಸ್ಥಾನದಲ್ಲಿ ನೆರವೇರಲಿದೆ.

# ಏ.20ರಂದು ಬಸವ ಜಯಂತಿ ಆಚರಣೆ

■ **ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಪಟ್ಟಣದ ಬಣಜಿಗ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಏ.20ರ ಸೋಮವಾರ ಬೆಳಿಗ್ಗೆ 10.30ಕ್ಕೆ ಗಜೇಂದ್ರಗಡ ರಸ್ತೆಯಲ್ಲಿರುವ ಶ್ರೀ ಬಸವೇಶ್ವರ ಇಂಜಿನಿಯರಿಂಗ್ ವರ್ಕ್ಸ್‌ನಲ್ಲಿ ಬಸವ ಜಯಂತಿ ಕಾರ್ಯಕ್ರಮ ನಡೆಯಲಿದೆ ಎಂದು ಪ್ರಕಟಣೆ ತಿಳಿಸಿದೆ. ಸಂಘದ ಅಧ್ಯಕ್ಷ ಶಿವಯೋಗಿ ಜಕ್ಕಲಿ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಈಶ್ವರೀಯ ವಿಶ್ವವಿದ್ಯಾಲಯದ ಸಂಚಾಲಕಿ ಬ್ರ.ಕು.



ಸವಿತಕ್ಕ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ. ಎಸ್‌ಎವಿ ಬಾಲಿಕೆಯರ ಪ್ರೌಢಶಾಲೆಯ ಮುಖ್ಯ ಶಿಕ್ಷಕ ಸಂಗಮೇಶ ಹೂಲಗೇರಿ ಅವರು ಉಪನ್ಯಾಸಕರಾಗಿ ಆಗಮಿಸಲಿದ್ದಾರೆ. ಬಣಜಿಗ ಸಮಾಜದ ಹಿರಿಯರಾದ ಸಿ.ವಿ. ವಂಕಲಕುಂಟಿ ಹಾಗೂ ಸಂಘದ ಗೌರವಾಧ್ಯಕ್ಷ ಗುರುಪಾದಪ್ಪ ಬೆಲ್ಲದ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ಸಂಗೀತ ಶಿಕ್ಷಕಿ ಗೀತಾ ಭೋಪಳಾಪೂರ ಅವರು ಸಂಗೀತ ಸೇವೆಯನ್ನು ನೀಡಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಯೂರಿಯಾ ರಸಗೊಬ್ಬರ ಮಿತ ಬಳಕೆ: ರೈತರಿಗೆ ಮಹತ್ವದ ಸಲಹೆ

■ ವಿಜಯಸಾಕ್ಷಿ ಸುದ್ದಿ, ಗದಗ

ಕೃಷಿಯಲ್ಲಿ ರಾಸಾಯನಿಕ ಗೊಬ್ಬರಗಳ ಅಸಮತೋಲನ ಬಳಕೆಯಿಂದ ಮಣ್ಣಿನ ಆರೋಗ್ಯ ಮತ್ತು ಉತ್ಪಾದಕತೆ ಮೇಲೆ ದುಷ್ಪರಿಣಾಮ ಉಂಟಾಗುತ್ತಿರುವ ಹಿನ್ನೆಲೆಯಲ್ಲಿ ರೈತರು ಯೂರಿಯಾ ರಸಗೊಬ್ಬರವನ್ನು ಮಿತವಾಗಿ ಬಳಸಬೇಕು ಎಂದು ಕೃಷಿ ಇಲಾಖೆ ಸಲಹೆ ನೀಡಿದೆ.

ಕಳೆದ ಐದು ವರ್ಷಗಳಲ್ಲಿ ರಾಸಾಯನಿಕ ಗೊಬ್ಬರಗಳ ಬಳಕೆ ಹೆಚ್ಚಾಗಿದ್ದು, ಸಾರಜನಕ : ರಂಜಕ : ಪೊಟ್ಯಾಶ್ ಅನುಪಾತದಲ್ಲಿ ಅಸಮತೋಲನ ಉಂಟಾಗಿದೆ. ಶಿಫಾರಸ್ಸಿಗಿಂತ ಹೆಚ್ಚು ಯೂರಿಯಾ ಬಳಸುವುದರಿಂದ ಬೆಳೆಗಳು ಅತಿಯಾಗಿ ಬೆಳೆಯುತ್ತವೆ ಮತ್ತು ಕೀಟ, ರೋಗ ಬಾಧೆಗಳು ಹೆಚ್ಚಾಗುತ್ತವೆ. ಇದರಿಂದ ಪೀಡೆನಾಶಕಗಳ ಅತಿಯಾದ ಬಳಕೆ ಆಗಿ, ಆಹಾರ ಸರಪಳಿಯಲ್ಲಿ ರಾಸಾಯನಿಕಗಳು ಸೇರಿ ಮನುಷ್ಯರು ಹಾಗೂ ಪ್ರಾಣಿ-ಪಕ್ಷಿಗಳ ಆರೋಗ್ಯಕ್ಕೆ ಹಾನಿ ಉಂಟಾಗುತ್ತದೆ.

ಯೂರಿಯಾದಲ್ಲಿರುವ ಸಾರಜನಕದ ಕೇವಲ 30-50% ಮಾತ್ರ ಬೆಳೆಗಳಿಂದ ಹೀರಿಕೊಳ್ಳಲ್ಪಡುತ್ತದೆ. ಉಳಿದ ಭಾಗ ನೈಟ್ರೇಟ್ ರೂಪದಲ್ಲಿ ಮಣ್ಣು, ನೀರು ಮತ್ತು ಗಾಳಿಯನ್ನು ಕಲುಷಿತಗೊಳಿಸುತ್ತದೆ. 2024ರ ವರದಿಯ ಪ್ರಕಾರ ದೇಶದ ಅನೇಕ ಜಿಲ್ಲೆಗಳ ಅಂತರ್ಜಲದಲ್ಲಿ ನೈಟ್ರೇಟ್ ಪ್ರಮಾಣ ಹೆಚ್ಚಾಗಿದೆ. ನೀರಿನಲ್ಲಿ ನೈಟ್ರೇಟ್ ಪ್ರಮಾಣ 45 ಮಿ.ಗ್ರಾಂ/ಲೀ. ಮೀರಿದರೆ ಅದು ಮಾನವ ಆರೋಗ್ಯಕ್ಕೆ ಅಪಾಯಕಾರಿ. ವಿಶೇಷವಾಗಿ ಶಿಶುಗಳಲ್ಲಿ "ಬ್ಲೂ ಬೇಬಿ ಸಿಂಡ್ರೋಮ್" ಎಂಬ ಗಂಭೀರ ಸಮಸ್ಯೆಗೆ ಕಾರಣವಾಗುತ್ತದೆ.

ಜಿಲ್ಲೆಯಲ್ಲಿ ಇರಬೇಕಾದ 4:2:1 (ಸಾರಜನಕ:ರಂಜಕ:ಪೊಟ್ಯಾಶ್) ಅನುಪಾತವು ಈಗ 7.44:4.31:1.0 ಆಗಿರುವುದು ಆತಂಕಕಾರಿ. ಈ ಹಿನ್ನೆಲೆಯಲ್ಲಿ ರೈತರು ಮಣ್ಣಿನ ಪರೀಕ್ಷೆ ಆಧರಿಸಿ ಶಿಫಾರಸ್ಸಿನಂತೆ ಮಾತ್ರ ಯೂರಿಯಾ ಬಳಕೆ ಮಾಡಬೇಕು. ದ್ವಿದಳಧಾನ್ಯ ಬೆಳೆಗಳು ವಾತಾವರಣದ ಸಾರಜನಕವನ್ನು ಮಣ್ಣಿಗೆ ಒದಗಿಸುವ ಗುಣ ಹೊಂದಿರುವುದರಿಂದ ಬೆಳೆ ಪರಿವರ್ತನೆ ಪದ್ಧತಿ ಅನುಸರಿಸುವುದು ಸೂಕ್ತ. ಜೊತೆಗೆ ಸಾವಯವ ಗೊಬ್ಬರ, ಹಸಿರೆಲೆ ಗೊಬ್ಬರ, ಜೈವಿಕ ಗೊಬ್ಬರ ಹಾಗೂ ನ್ಯಾನೋ ಗೊಬ್ಬರಗಳ ಬಳಕೆಯನ್ನು ಹೆಚ್ಚಿಸಬೇಕು ಎಂದು ಗದಗ ಜಿಲ್ಲಾ ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಮಹಿಳಾ ಮೀಸಲಾತಿ ಜಾರಿಗೆ ವಿಳಂಬ ತಂತ್ರ - ಕಾಂಗ್ರೆಸ್ ಕೊಡುಗೆಗಳನ್ನೇ ಬಿಜೆಪಿ ತನ್ನದಾಗಿ ತೋರಿಸುತ್ತಿದೆ ಮಂದಾಲಿ ಟೀಕೆ**

# ಮಹಿಳಾ ಮೀಸಲು ಬಿಜೆಪಿ ನಾಟಕ



"ನಾಲ್ಕು ದಶಕಗಳಿಂದ ಕಾಂಗ್ರೆಸ್ ಮಹಿಳಾ ಸಬಲೀಕರಣಕ್ಕಾಗಿ ನಿಜವಾದ ಕೆಲಸ ಮಾಡುತ್ತಿದೆ. ಬಿಜೆಪಿ ಮಾತ್ರ ಅದನ್ನು ರಾಜಕೀಯವಾಗಿ ಬಳಸಿಕೊಳ್ಳುತ್ತಿದೆ."
– **ಅಶೋಕ ಮಂದಾಲಿ,** ಪ್ರಚಾರ ಸಮಿತಿ ಜಿಲ್ಲಾ ಅಧ್ಯಕ್ಷ.

**ಕರ್ನಾಟಕ ಕಾಂಗ್ರೆಸ್ ಸರ್ಕಾರದ ಸಾಧನೆ**

*) ಶಕ್ತಿ ಯೋಜನೆ: ಉಚಿತ ಬಸ್ ಪ್ರಯಾಣ – 544 ಕೋಟಿ ಪ್ರಯಾಣಿಕರು
*) ಗೃಹಲಕ್ಷ್ಮಿ ಯೋಜನೆ: 2000 ನೆರವು 1.24 ಕೋಟಿ ಮಹಿಳೆಯರಿಗೆ ಲಾಭ

**ಮಹಿಳಾ ಹಕ್ಕುಗಳಿಗೆ ಕಾಂಗ್ರೆಸ್ ಐತಿಹಾಸಿಕ ಹೆಜ್ಜೆಗಳು**

*) 1950: ಸಂವಿಧಾನದ ಮೂಲಕ ಸಮಾನ ಹಕ್ಕು (ವಿಧಿ 14, 15)
*) 1955-56: ಹಿಂದೂ ವಿವಾಹ ಮತ್ತು ಉತ್ತರಾಧಿಕಾರ ಕಾಯ್ದೆ
*) 1961: ವರದಕ್ಷಿಣೆ ನಿಷೇಧ ಕಾಯ್ದೆ
*) 1992-93: 73-74ನೇ ತಿದ್ದುಪಡಿ – ಸ್ಥಳೀಯ ಸಂಸ್ಥೆಗಳಲ್ಲಿ ಮಹಿಳಾ ಮೀಸಲು
*) 1992: ರಾಷ್ಟ್ರೀಯ ಮಹಿಳಾ ಆಯೋಗ ಸ್ಥಾಪನೆ
*) 2005: ಕೌಟುಂಬಿಕ ದೌರ್ಜನ್ಯ ತಡೆ ಕಾಯ್ದೆ
*) 2005: ಪುತ್ರಿಯರಿಗೆ ಆಸ್ತಿ ಹಕ್ಕು (ತಿದ್ದುಪಡಿ)
*) 2006: ನರೇಗಾ – ಮಹಿಳೆಯರಿಗೆ ಉದ್ಯೋಗ, ಸಮಾನ ವೇತನ
*) 2010: ಮಹಿಳಾ ಮೀಸಲಾತಿ ಮಸೂದೆ (ರಾಜ್ಯಸಭೆಯಲ್ಲಿ ಅಂಗೀಕಾರ)
*) 2013: POSH ಕಾಯ್ದೆ, ನಿರ್ಭಯಾ ನಿಧಿ

■ ವಿಜಯಸಾಕ್ಷಿ ಸುದ್ದಿ, ಗದಗ

ಕೇಂದ್ರ ಬಿಜೆಪಿ ಸರ್ಕಾರ ಮಹಿಳಾ ಮೀಸಲಾತಿ ವಿಚಾರದಲ್ಲಿ ನಾಟಕವಾಡುತ್ತಿದೆ ಎಂದು ಗದಗ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷರು ಹಾಗೂ ತಾಲೂಕು ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಅಶೋಕ ಮಂದಾಲಿ ತೀವ್ರ ವಾಗ್ದಾಳಿ ನಡೆಸಿದ್ದಾರೆ.

ಸ್ವಾತಂತ್ರ್ಯ ನಂತರ ದೇಶದಲ್ಲಿ ಸಾಮಾಜಿಕ ಸಮಾನತೆ, ಸಾಮಾಜಿಕ ಪ್ರಾತಿನಿಧ್ಯ ಮತ್ತು ಸಾಮಾಜಿಕ ನ್ಯಾಯಕ್ಕಾಗಿ ಶ್ರಮಿಸಿದ ಪಕ್ಷ ಕಾಂಗ್ರೆಸ್ ಮಾತ್ರವಾಗಿದ್ದು, ಮಹಿಳಾ ಸಬಲೀಕರಣಕ್ಕೆ ಹಲವು ಐತಿಹಾಸಿಕ ಕ್ರಮಗಳನ್ನು ಕಾಂಗ್ರೆಸ್ ಸರ್ಕಾರಗಳು ಜಾರಿಗೊಳಿಸಿವೆ ಎಂದು ಅವರು ತಿಳಿಸಿದ್ದಾರೆ. ರಾಜೀವ್ ಗಾಂಧಿ ನೇತೃತ್ವದ ಕಾಂಗ್ರೆಸ್ ಸರ್ಕಾರ ಸ್ಥಳೀಯ ಸಂಸ್ಥೆಗಳಲ್ಲಿ ಮಹಿಳೆಯರಿಗೆ ಶೇ.33ರಷ್ಟು ಮೀಸಲಾತಿ ನೀಡುವ ಮೂಲಕ ಸುಮಾರು 15 ಲಕ್ಷ ಮಹಿಳಾ ಪ್ರತಿನಿಧಿಗಳನ್ನು ರೂಪಿಸಿತು. ಆದರೆ 2014ರಿಂದ ಬಿಜೆಪಿ ಅಧಿಕಾರಕ್ಕೆ ಬಂದ ಬಳಿಕ ಕಾಂಗ್ರೆಸ್ ಯೋಜನೆಗಳನ್ನು ಮರುನಾಮಕರಣ ಮಾಡಿ ತಮ್ಮ ಸಾಧನೆಗಳೆಂದು ಬಿಂಬಿಸಲಾಗುತ್ತಿದೆ ಎಂದು ಆರೋಪಿಸಿದ್ದಾರೆ. ಲೋಕಸಭೆ ಮತ್ತು ವಿಧಾನಸಭೆಗಳಲ್ಲಿ ಮಹಿಳಾ ಮೀಸಲಾತಿಯನ್ನು 2029ರಿಂದ ಜಾರಿಗೆ ತರಲಾಗುತ್ತದೆ ಎಂಬ ಬಿಜೆಪಿ ಹೇಳಿಕೆ ಕೇವಲ ರಾಜಕೀಯ ಪ್ರಚಾರ ಮಾತ್ರವಾಗಿದ್ದು, 2014 ಹಾಗೂ 2019ರ ಚುನಾವಣಾ ಭರವಸೆಗಳನ್ನು ಈವರೆಗೆ ಈಡೇರಿಸಲಾಗಿಲ್ಲ ಎಂದು ಪ್ರಶ್ನಿಸಿದ್ದಾರೆ. 2023ರಲ್ಲಿ ಅಂಗೀಕರಿಸಿದ "ನಾರಿ ಶಕ್ತಿ ವಂದನ ಅಧಿನಿಯಮ"ವನ್ನು 2027ರ ಜನಗಣತಿಯ ನಂತರ ಜಾರಿಗೆ ತರುತ್ತೇವೆ ಎಂಬುದು ವಿಳಂಬ ತಂತ್ರವಾಗಿದ್ದು, OBC ಮಹಿಳೆಯರಿಗೆ ಒಳಮೀಸಲಾತಿ ನೀಡದಿರುವುದೂ ಗಂಭೀರ ವಿಷಯವಾಗಿದೆ ಎಂದು ಅವರು ಟೀಕಿಸಿದ್ದಾರೆ. ಪ್ರಸ್ತುತ ಲೋಕಸಭೆಯಲ್ಲಿ ಮಹಿಳಾ ಪ್ರತಿನಿಧಿತ್ವ ಶೇ.13.6ಕ್ಕಿಂತ ಕಡಿಮೆ ಇದ್ದು, ಮಹಿಳಾ ಸಬಲೀಕರಣದಲ್ಲಿ ನಿಜವಾದ ಪ್ರಗತಿ ಕಾಂಗ್ರೆಸ್ ಸರ್ಕಾರಗಳ ಕೊಡುಗೆಯಾಗಿದೆ ಎಂದು ತಿಳಿಸಿದ್ದಾರೆ. ಸಂವಿಧಾನಿಕ ಹಕ್ಕುಗಳಿಂದ ಹಿಡಿದು ಮಹಿಳಾ ಮೀಸಲಾತಿ ಮಸೂದೆವರೆಗೆ ಹಲವು ಮಹತ್ವದ ನಿರ್ಧಾರಗಳನ್ನು ಕಾಂಗ್ರೆಸ್ ಸರ್ಕಾರಗಳು ಜಾರಿಗೆ ತಂದಿದ್ದು, ಕರ್ನಾಟಕದಲ್ಲಿ ಶಕ್ತಿ ಮತ್ತು ಗೃಹಲಕ್ಷ್ಮಿ ಯೋಜನೆಗಳು ಮಹಿಳೆಯರ ಆರ್ಥಿಕ ಹಾಗೂ ಸಾಮಾಜಿಕ ಸಬಲೀಕರಣಕ್ಕೆ ನೆರವಾಗಿವೆ ಎಂದು ಅಶೋಕ ಮಂದಾಲಿ ಹೇಳಿದ್ದಾರೆ.

# ಪಿಯುಸಿ ಪರೀಕ್ಷೆಯಲ್ಲಿ ರೇಣುಕಾ ಉಮೇಶ್ ಸಾಧನೆ

■ ವಿಜಯಸಾಕ್ಷಿ ಸುದ್ದಿ, ಗದಗ



ಹಾತಲಗೇರಿ ಗ್ರಾಮದ ಆದರ್ಶ ವಿದ್ಯಾರ್ಥಿನಿ ರೇಣುಕಾ ಉಮೇಶ್ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದ್ದಾರೆ. 2026-27ನೇ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ 600ಕ್ಕೆ 583 ಅಂಕಗಳನ್ನು ಪಡೆದು ಶೇ.97.17 ಅಂಕಗಳೊಂದಿಗೆ ತೇರ್ಗಡೆಯಾಗಿದ್ದಾರೆ.

ರೇಣುಕಾ ಉಮೇಶ್ ಸಿದ್ಧಲಿಂಗನಗರ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ (ಜೆ.ಜಿ.ಓ-192) ವ್ಯಾಸಂಗ ಮಾಡುತ್ತಿದ್ದು, ಅವರ ಸಾಧನೆಗೆ ಶಿಕ್ಷಣ ವಲಯದಲ್ಲಿ ಮೆಚ್ಚುಗೆ ವ್ಯಕ್ತವಾಗಿದೆ.

ವಿದ್ಯಾರ್ಥಿನಿಯ ಸಾಧನೆಯನ್ನು ಗುರುತಿಸಿ ಹಿರಿಯ ಶಿಕ್ಷಕ ಹಾಗೂ ಸಾಹಿತಿ ಮಲ್ಲಿಕಾರ್ಜುನ ಪೂಜಾರ ಅವರು ರೇಣುಕಾ ಅವರ ಸ್ವಗೃಹಕ್ಕೆ ಭೇಟಿ ನೀಡಿ ಸನ್ಮಾನಿಸಿ ಗೌರವಿಸಿದರು.

ಈ ಸಂದರ್ಭದಲ್ಲಿ ಊರಿನ ಗಣ್ಯರಾದ ಪಕ್ಕೀರಪ್ಪ ಎನ್. ಅಬ್ಬಿಗೇರಿ, ಸತ್ಯಪ್ಪ ಎಸ್. ಸಣಗೇರಿ, ಹನಮಪ್ಪ ಬಿ. ಕರಿ, ರಮೇಶ ಎಸ್. ಹಾದಿಮನಿ, ನಾಗಪ್ಪ ಎಚ್. ಗದಗ ಹಾಗೂ ಉಮೇಶ ಎಚ್. ಗದಗ ಅವರು ವಿದ್ಯಾರ್ಥಿನಿಗೆ ಅಭಿನಂದನೆ ಸಲ್ಲಿಸಿದರು.

# "ಶಿಗ್ಲಿಯ ಸ್ವಾತಂತ್ರ್ಯ ಯೋಧರು" ಪುಸ್ತಕ ಸಂವಾದ ನಾಳೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಶಿಗ್ಲಿಯಲ್ಲಿ ವರಕವಿ ಡಾ. ದ.ರಾ. ಬೇಂದ್ರೆ ಸಾಹಿತ್ಯ ಮತ್ತು ಸಾಂಸ್ಕೃತಿಕ ವೇದಿಕೆ (ರಿ) ರಾಮಗಿರಿ ಹಾಗೂ ಕಾಸರಗೋಡಿನ ಕನ್ನಡ ಭವನ ಗ್ರಂಥಾಲಯ (ರಿ) ಗದಗ ಜಿಲ್ಲಾ ಘಟಕದ ಸಂಯುಕ್ತ ಆಶ್ರಯದಲ್ಲಿ ಎಪ್ರಿಲ್ 19ರಂದು ಬೆಳಿಗ್ಗೆ 10.30ಕ್ಕೆ ಶಿಗ್ಲಿ ಸೇವಾ ಮಂದಿರದಲ್ಲಿ ಶಿಕ್ಷಕ-ಸಾಹಿತಿ ಆರ್.ಎಂ. ಹೊನಕೇರಿ ಅವರ "ಶಿಗ್ಲಿಯ ಸ್ವಾತಂತ್ರ್ಯ ಯೋಧರು" ಪುಸ್ತಕ ಸಂವಾದ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮಕ್ಕೆ ಸೇವಾ ಮಂದಿರದ ಶ್ರೀ ಇಷ್ಟಲಿಂಗ ಮಹಾಸ್ವಾಮಿಗಳು ಸಾನಿಧ್ಯ ವಹಿಸಲಿದ್ದಾರೆ. ವರಕವಿ ಡಾ. ದ.ರಾ. ಬೇಂದ್ರೆ ಸಾಹಿತ್ಯ ಮತ್ತು ಸಾಂಸ್ಕೃತಿಕ ವೇದಿಕೆಯ ಸಂಸ್ಥಾಪಕ ಅಧ್ಯಕ್ಷ ಡಾ. ಎಸ್.ವಿ. ತಮ್ಮನಗೌಡ್ರ ಅಧ್ಯಕ್ಷತೆ ವಹಿಸಲಿದ್ದಾರೆ.

ಅತಿಥಿಗಳಾಗಿ ನ್ಯಾಯವಾದಿ ಎಸ್.ಪಿ. ಬಳಿಗಾರ, ಸಾಹಿತಿ ಚಾಂದಸಾಹೇಬ ಗೋಕಾವಿ, ಕೃಷ್ಣಾ ಬಿದರಳ್ಳಿ, ನಾಗರಾಜ ಹಣಗಿ, ಕಸ್ತೂರೆಮ್ಮ ಹಿರೇಮಠ, ಸೋಮಣ್ಣ ಡಾಣಗಲ್ಲ, ವೀರಣ್ಣ ಪವಾಡದ, ಶಿವಯೋಗಿ ಬಸವಕುಮಾರ ಮುಳಗುಂದಮಠ, ಶಂಕ್ರಪ್ಪ ಶಿಳ್ಳಿನ, ಸುಭಾಷ ಪೂಜಾರ ಸೇರಿದಂತೆ ಹಲವಾರು ಗುರುಹಿರಿಯರು ಭಾಗವಹಿಸಲಿದ್ದಾರೆ.

# ಕಾಂಗ್ರೆಸ್ ಪ್ರಚಾರ ಸಮಿತಿ ಪದಾಧಿಕಾರಿಗಳ ಪದಗ್ರಹಣ ಮುಂದೂಡಿಕೆ



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿರುವ ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ಕಾರ್ಯಾಲಯದಲ್ಲಿ ಎ. 19ರಂದು ಹಮ್ಮಿಕೊಂಡಿದ್ದ ಗದಗ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಪದಾಧಿಕಾರಿಗಳ ಪದಗ್ರಹಣ ಹಾಗೂ ತರಬೇತಿ ಕಾರ್ಯಕ್ರಮವನ್ನು ಅನಿವಾರ್ಯ ಕಾರಣಗಳಿಂದಾಗಿ ಮುಂದೂಡಲಾಗಿದೆ. ಮುಂದಿನ ದಿನಗಳಲ್ಲಿ ಕಾರ್ಯಕ್ರಮ ದಿನವನ್ನು ತಿಳಿಸಲಾಗುವುದು ಎಂದು ಗದಗ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ತಿಳಿಸಿದ್ದಾರೆ.

**ಭಿಕ್ಷಾಟನೆ ಹಾಗೂ ವರ್ಷಾಸನೆ ಪಡೆಯುವ ಸಂಪ್ರದಾಯ ನೆರವೇರಿಸಿದ ಶ್ರೀಗಳು**

# "ಜಾತ್ರೆ, ಉತ್ಸವಗಳು ಸಮಾಜದಲ್ಲಿ ಸಾಮರಸ್ಯ ಬೆಳೆಸುವ ಸಾಧನಗಳು"

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಈ ವರ್ಷವೂ ನಾಡಿನಲ್ಲಿ ಸುಖ, ಶಾಂತಿ, ನೆಮ್ಮದಿ ನೆಲೆಸಲಿ, ಉತ್ತಮ ಮಳೆ-ಬೆಳೆ ದೊರೆಯಲಿ, ರೈತರು ಹಾಗೂ ಸಕಲ ಜೀವರಾಶಿಗಳು ಸಂತೃಪ್ತ ಜೀವನ ನಡೆಸಲಿ ಎಂದು ಪ್ರಾರ್ಥಿಸಿದರು. ದ್ವೇಷ-ಅಸೂಯೆ ನಿವಾರಣೆಯಾಗಲಿ, ಪ್ರೀತಿ-ಸ್ನೇಹ ವೃದ್ಧಿಸಲಿ ಎಂದು ದೇವರಲ್ಲಿ ಭಿನ್ನಹ ಸಲ್ಲಿಸಿ ಜಾತ್ರೆಯನ್ನು ಯಶಸ್ವಿಯಾಗಿ ಆಚರಿಸೋಣ ಎಂದು ಫಕೀರ ಸಿದ್ದರಾಮ ಶ್ರೀಗಳು ಕರೆ ನೀಡಿದರು.

ಜಾತ್ರೆಗಳು ಮತ್ತು ಉತ್ಸವಗಳು ಸಮಾಜದಲ್ಲಿ ಪ್ರೀತಿ, ಸ್ನೇಹ ಹಾಗೂ ಸಾಮರಸ್ಯವನ್ನು ಬೆಳೆಸುವ ಮಹತ್ವದ ಸಾಧನಗಳಾಗಿದ್ದು, ಜಾತಿ-ಮತ ಭೇದವಿಲ್ಲದೆ ಎಲ್ಲರನ್ನು ಒಂದಾಗಿಸುವ ಭಾವೈಕ್ಯತೆಯ ಸಂಕೇತಗಳಾಗಿವೆ ಎಂದು ಶಿರಹಟ್ಟಿ ಸಂಸ್ಥಾನ ಮಠದ ಶ್ರೀ ಫಕೀರ ಸಿದ್ಧರಾಮ ಮಹಾಸ್ವಾಮಿಗಳು ಹೇಳಿದರು.

ಪ್ರತಿವರ್ಷ ಆಗಿಹುಣ್ಣಿಮೆ ದಿನ ನಡೆಯುವ ಶಿರಹಟ್ಟಿಯ ಶ್ರೀ ಫಕ್ಕೀರೇಶ್ವರ ಮಠದ ಜಾತ್ರೆಯ ಅಂಗವಾಗಿ ಬುಧವಾರ ಮತ್ತು ಗುರುವಾರ ಯತ್ನಳ್ಳಿ ಗ್ರಾಮಕ್ಕೆ ಆಗಮಿಸಿದ ಶ್ರೀಗಳು ಭಿಕ್ಷಾಟನೆ ಹಾಗೂ ವರ್ಷಾಸನೆ ಪಡೆಯುವ ಸಂಪ್ರದಾಯ ನೆರವೇರಿಸಿ ಭಕ್ತರಿಗೆ ಆಶೀರ್ವಾದ ನೀಡಿದರು.

ಈ ವೇಳೆ ಭಕ್ತರ ಮನೆಗಳಿಗೆ ಭೇಟಿ ನೀಡಿದ ಶ್ರೀಗಳು ಕಾಣಿಕೆ, ದವಸ-ಧಾನ್ಯಗಳನ್ನು ಸ್ವೀಕರಿಸಿದರು. ಭಕ್ತರು ಕಾಣಿಕೆ ನೀಡಿ ಶ್ರೀಗಳ ಆಶೀರ್ವಾದ ಪಡೆದುಕೊಂಡು ಜಗದ್ಗುರುಗಳಿಗೆ ಜಯಘೋಷ ಕೂಗಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮಹಾಸ್ವಾಮಿಗಳು, ಜಾತ್ರೆ ಮುನ್ನಾ ದಿನ ಪಟ್ಟಣದಲ್ಲಿ ವರ್ಷಾಸನೆ ನಡೆಸುವುದು ಸಂಪ್ರದಾಯವಾಗಿದ್ದು, ಇದು ಭಾವೈಕ್ಯತೆ ಮತ್ತು ಸಾಮಾಜಿಕ ಸಾಮರಸ್ಯದ ಪ್ರತೀಕವಾಗಿದೆ ಎಂದರು. ಮಠದ ಪರಂಪರೆಯಂತೆ ಜಾತ್ರೆಯ ಮುನ್ನಾ ದಿನ ಬಡವರು, ಶ್ರೀಮಂತರು ಹಾಗೂ ಜಾತಿ, ಮತ, ಪಂಥ ಬೇಧವಿಲ್ಲದೆ ಎಲ್ಲರಿಂದ ಭಿಕ್ಷೆ ಸ್ವೀಕರಿಸಲಾಗುತ್ತದೆ ಎಂದು ತಿಳಿಸಿದರು. ಮಠದ ಜಾತ್ರೆಯಲ್ಲಿ ಎಲ್ಲರೂ ಪಾಲ್ಗೊಂಡು ಫಕ್ಕೀರೇಶ್ವರರ ಕೃಪೆಗೆ ಪಾತ್ರರಾಗಬೇಕು ಎಂದು ಮನವಿ ಮಾಡಿದರು. ಈ ವೇಳೆ ಕುಂದಗೋಳದ ಶ್ರೀ ಬಸವಣ್ಣಜ್ಜನವರು ಉಪಸ್ಥಿತರಿದ್ದರು. ಗ್ರಾಮದ ಹಿರಿಯರಾದ ನಿಂಗನಗೌಡ್ರ ಪಾಟೀಲ, ರಾಮನಗೌಡ್ರ ಕುಂದಗೋಳ, ಫಕ್ಕೀರಗೌಡ್ರ ಹತ್ತಿ, ಶೇಖರಗೌಡ ಪಾಟೀಲ, ಸಿದ್ದರಾಮನಗೌಡ್ರ ರಾಯನಗೌಡ್ರ, ಸಿ.ಬಿ. ಪಾಟೀಲ, ದ್ಯಾವನಗೌಡ ಡೋಣಿ, ಸಿ.ಎನ್. ಬೆಟದೂರ, ಎಸ್.ಸಿ. ಪಾಟೀಲ, ಎಂ.ಸಿ. ಸೋಮವಾರದ, ಪಿ.ಹೆಚ್. ಪಾಟೀಲ, ಶಾಬುದಿನ್ ಪರಿಟ್ ಸೇರಿದಂತೆ ಗ್ರಾಮದ ಹಿರಿಯರು ಹಾಗೂ ಭಕ್ತರು ಪಾಲ್ಗೊಂಡಿದ್ದರು.

# ನೂರಾನಿ ಚಾರಿಟೇಬಲ್ ಟ್ರಸ್ಟ್‌ನಿಂದ ತಾರಾಲಯಕ್ಕೆ ಟೆಲಿಸ್ಕೋಪ್ ದೇಣಿಗೆ



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಐಎಂಎ ಶತಮಾನೋತ್ಸವ ಸಂಭ್ರಮಾಚರಣೆಯ ಅಂಗವಾಗಿ ನೂರಾನಿ ಚಾರಿಟೇಬಲ್ ಟ್ರಸ್ಟ್ ವತಿಯಿಂದ ಬೆಟಗೇರಿಯ ಖಗೋಳ ತಾರಾಲಯಕ್ಕೆ ಅತ್ಯಾಧುನಿಕ ಗುಣಮಟ್ಟದ ಟೆಲಿಸ್ಕೋಪ್ ದೇಣಿಗೆಯಾಗಿ ನೀಡಲಾಗಿದೆ.

ಐಎಂಎ ಮಾಜಿ ಅಧ್ಯಕ್ಷರು ಹಾಗೂ ನೂರಾನಿ ಚಾರಿಟೇಬಲ್ ಟ್ರಸ್ಟ್‌ನ ಚೇರ್ಮನ್ ಆಗಿರುವ ಹಿರಿಯ ತಜ್ಞ ವೈದ್ಯ ಡಾ. ಪ್ಯಾರಅಲಿ ನೂರಾನಿ ಅವರು ಈ ಟೆಲಿಸ್ಕೋಪ್ ಅನ್ನು ಹಸ್ತಾಂತರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಡಾ. ನೂರಾನಿ, ಮಕ್ಕಳಲ್ಲಿ ವಿಜ್ಞಾನ ಹಾಗೂ ಖಗೋಳಶಾಸ್ತ್ರದ ಕುರಿತು ಆಸಕ್ತಿ ಹೆಚ್ಚಿಸುವುದು ಮತ್ತು ವೈಜ್ಞಾನಿಕ ಚಿಂತನೆಗಳನ್ನು ಬೆಳೆಸುವುದು ಈ ದೇಣಿಗೆಯ ಮುಖ್ಯ ಉದ್ದೇಶವಾಗಿದೆ.

ತಾರಾಲಯಕ್ಕೆ ಆಗಮಿಸುವ ವಿದ್ಯಾರ್ಥಿಗಳಿಗೆ ಆಕಾಶಕಾಯಗಳ ಅಧ್ಯಯನವನ್ನು ಹೆಚ್ಚು ಪರಿಣಾಮಕಾರಿಯಾಗಿ ಮಾಡಿಕೊಳ್ಳಲು ಇದು ಸಹಾಯಕವಾಗಲಿದೆ ಎಂದು ಹೇಳಿದರು.

ಟೆಲಿಸ್ಕೋಪ್ ದೇಣಿಗೆಯನ್ನು ಸ್ವೀಕರಿಸಿದ ಗದಗ ಐಎಂಎ ಅಧ್ಯಕ್ಷ ಡಾ. ಶ್ರೀಧರ ಕುರಡಗಿ, ಡಿಡಿಪಿಐ ಆರ್.ಎಸ್. ಬುರಡಿ, ಬಿಇಒ ಆರ್.ವಿ. ಶೆಟ್ಟೆಪ್ಪನವರ ಹಾಗೂ ಸಮನ್ವಯ ಅಧಿಕಾರಿ ಎಸ್.ಪಿ. ಪ್ರಭಯ್ಯನಮಠ ಅವರು ಡಾ. ಪ್ಯಾರಅಲಿ ನೂರಾನಿ ಅವರಿಗೆ ಅಭಿನಂದನೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಹಿರಿಯ ವಿಜ್ಞಾನಿ ದಾಸಗುಪ್ತಾ, ಹೈಟೆಕ್ ಸಂಸ್ಥೆಯ ಸಾಯಿಕುಮಾರ, ತಾರಾಲಯದ ಉಸ್ತುವಾರಿ ಶ್ರೀಮತಿ ಸರೋಜಿನಿ ಬಂಡಿವಡ್ಡರ, ಮೊಹ್ಮದ್ ಶಫಿ ಯರಗುಡಿ, ಎಂ.ಎಚ್. ಸವದತ್ತಿ, ಶ್ಯಾಮ್ ಲಾಂಡೆ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ವೀರಶೈವ ಮಹಾಸಭಾದಿಂದ ಬಸವ ಜಯಂತಿ

■ ವಿಜಯಸಾಕ್ಷಿ ಸುದ್ದಿ, ಗದಗ

ಅಖಿಲ ಭಾರತ ವೀರಶೈವ ಮಹಾಸಭಾ ಗದಗ ಜಿಲ್ಲಾ ಘಟಕವು ಎ.20 ರಂದು ಸೋಮವಾರ ಮುಂಜಾನೆ 8 ಗಂಟೆಗೆ ಗದುಗಿನ ವೀರಶೈವ ಜನರಲ್ ಲೈಬ್ರರಿಯಲ್ಲಿ ಬಸವ ಜಯಂತಿ ಕಾರ್ಯಕ್ರಮವನ್ನು ಆಯೋಜಿಸಿದೆ. ಸಮಾರಂಭದ ಅಧ್ಯಕ್ಷತೆಯನ್ನು ಮಹಾಸಭಾದ ಜಿಲ್ಲಾಧ್ಯಕ್ಷರಾದ ಶರಣಬಸಪ್ಪ ಗುಡಿಮನಿ ವಹಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ಎಲ್ಲ ಪದಾಧಿಕಾರಿಗಳು, ಆಜೀವ ಸದಸ್ಯರು ಹಾಗೂ ಬಸವಾಭಿಮಾನಿಗಳು ಪಾಲ್ಗೊಳ್ಳಬೇಕೆಂದು ಮನವಿ ಮಾಡಲಾಗಿದೆ.

ಜೊತೆಗೆ ಜಿಲ್ಲಾಡಳಿತದಿಂದ ನಡೆಯುವ ಬಸವ ಜಯಂತಿ ಮೆರವಣಿಗೆಯು ತೋಂಟದಾರ್ಯ ಮಠದಿಂದ ಆರಂಭಗೊಳ್ಳಲಿದ್ದು, ಮೆರವಣಿಗೆ ಹಾಗೂ ಜಿಲ್ಲಾಡಳಿತ ಭವನದಲ್ಲಿ ನಡೆಯುವ ಕಾರ್ಯಕ್ರಮದಲ್ಲಿಯೂ ಭಾಗವಹಿಸಬೇಕೆಂದು ಮಹಾಸಭಾದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮುರುಘರಾಜೇಂದ್ರ ಬಡ್ನಿ ವಿನಂತಿಸಿದ್ದಾರೆ.

**ಅಕ್ಕಮಹಾದೇವಿ ವಚನ ಚಿಂತನೆ, ಅಂಬೇಡ್ಕರ್ ಜಯಂತಿ ಆಚರಣೆಯಲ್ಲಿ ಡಾ. ರಶ್ಮಿ ಅಂಗಡಿ**

# ಅಕ್ಕ ಮಹಾದೇವಿ ವಚನಗಳು ಜ್ಞಾನದ ಮಹಾ ಬೆಳಕು



ಅಂಬೇಡ್ಕರ್ ಜಯಂತಿಯ ಅಂಗವಾಗಿ ಉಪನ್ಯಾಸ ನೀಡಿದ ಜಗದ್ಗುರು ತೋಂಟದಾರ್ಯ ಪದವಿಪೂರ್ವ ಮಹಾವಿದ್ಯಾಲಯದ ಉಪನ್ಯಾಸಕ ಪ್ರೊ. ಪ್ರಕಾಶ್ ತಳವಾರ್, ಡಾ. ಬಿ.ಆರ್. ಅಂಬೇಡ್ಕರ್ ಅವರ ಕೊಡುಗೆ ಅಪಾರವಾಗಿದ್ದು, ಜಾತಿ, ಮತ, ಪಂಥ ಭೇದಗಳನ್ನು ನಿವಾರಿಸಿ ಮಾನವ ಕಲ್ಯಾಣದ ದಾರಿಯನ್ನು ತೋರಿಸಿದ ಮಹನೀಯರು ಎಂದರು. ಸ್ವಾತಂತ್ರ್ಯ, ಸಮಾನತೆ, ಭ್ರಾತೃತ್ವ ಹಾಗೂ ಸೌಹಾರ್ದತೆಯ ಮೌಲ್ಯಗಳನ್ನು ಜನಮಾನಸದಲ್ಲಿ ಬಿತ್ತಿದ ಅವರು, ಅವುಗಳ ಸರಿಯಾದ ಅನುಷ್ಠಾನದಿಂದ ಮಾತ್ರ ಸಮ ಸಮಾಜದ ಕನಸು ನನಸಾಗುತ್ತದೆ ಎಂದು ಹೇಳಿದರು.

■ ವಿಜಯಸಾಕ್ಷಿ ಸುದ್ದಿ, ಗದಗ

ವೈರಾಗ್ಯ ಮತ್ತು ಆತ್ಮಜ್ಞಾನವನ್ನು ಪ್ರತಿಬಿಂಬಿಸುವ ಅಕ್ಕಮಹಾದೇವಿಯ ವಚನಗಳು ಜ್ಞಾನದ ಮಹಾ ಬೆಳಕಿನಂತಿದ್ದು, ಸದೃಢ ಸಮಾಜ ನಿರ್ಮಾಣಕ್ಕೂ ಹಾಗೂ ಮಹಿಳೆಯ ಗಟ್ಟಿತನದ ವ್ಯಕ್ತಿತ್ವ ರೂಪುಗೊಳ್ಳಲು ಪೂರಕವಾಗಿವೆ ಎಂದು ಡಾ. ರಶ್ಮಿ ಅಂಗಡಿ ಹೇಳಿದರು.

ಗದಗ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು, ಕದಳಿ ಮಹಿಳಾ ವೇದಿಕೆ ಹಾಗೂ ತಾಲೂಕ ಶರಣ ಸಾಹಿತ್ಯ ಪರಿಷತ್ತು ಮತ್ತು ಕದಳಿ ಮಹಿಳಾ ವೇದಿಕೆಯ ಸಹಯೋಗದಲ್ಲಿ ನಗರದ ತೋಂಟದಾರ್ಯ ಮಠದ ಆವರಣದಲ್ಲಿರುವ ಶರಣ ಸಾಹಿತ್ಯ ಪರಿಷತ್ತಿನ ಕಾರ್ಯಾಲಯದಲ್ಲಿ ಅಕ್ಕಮಹಾದೇವಿಯ ವಚನಗಳ ಚಿಂತನೆಯ ವಿಶೇಷ ಉಪನ್ಯಾಸ ಹಾಗೂ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಜಯಂತಿ ಕಾರ್ಯಕ್ರಮ ನಡೆಯಿತು.

ವಿಶೇಷ ಉಪನ್ಯಾಸಕರಾಗಿ ಆಗಮಿಸಿದ್ದ ಡಾ. ರಶ್ಮಿ ಅಂಗಡಿ ಮಾತನಾಡಿ, ಅಕ್ಕನ ವಚನಗಳಲ್ಲಿ ಬದುಕಿನ ಎಲ್ಲಾ ಆಯಾಮಗಳನ್ನು ಒಳಗೊಂಡ ಆಳವಾದ ವಿಚಾರಧಾರೆ ಅಡಕವಾಗಿದ್ದು, ಸಮಾಜದ ಉನ್ನತಿಗೆ ದಾರಿದೀಪವಾಗಿವೆ ಎಂದು ಅಭಿಪ್ರಾಯಪಟ್ಟರು.

ಗದಗ ಜಿಲ್ಲಾ ಕದಳಿ ಮಹಿಳಾ ವೇದಿಕೆಯ ಅಧ್ಯಕ್ಷೆ ಶ್ರೀಮತಿ ಸುಧಾ ಹುಚ್ಚಣ್ಣವರ ಪ್ರಸ್ತಾವಿಕವಾಗಿ ಮಾತನಾಡಿ, ಅಕ್ಕಮಹಾದೇವಿಯ ವ್ಯಕ್ತಿತ್ವ ಸ್ತ್ರೀ ಸಂವೇದನೆಯ ಅಸ್ಮಿತೆಯಾಗಿ ಹೊರಹೊಮ್ಮಿದ್ದು, ಮೌಲ್ಯಯುತ ಬದುಕಿಗೆ ಅಗತ್ಯವಾದ ಎಲ್ಲಾ ಮಾರ್ಗದರ್ಶನ ಅಕ್ಕನ ವಚನಗಳಲ್ಲಿ ಅಡಕವಾಗಿದೆ ಎಂದರು. ಡಾ. ಅಂಬೇಡ್ಕರ್ ನೀಡಿದ ಸಂವಿಧಾನಿಕ ಹಕ್ಕುಗಳನ್ನು ಅರಿತು ಜೀವನದಲ್ಲಿ ಅನುಸರಿಸಿದಾಗ ಮಾತ್ರ ಅದರ ಸಾರ್ಥಕತೆ ಸಿಗುತ್ತದೆ ಎಂದು ಹೇಳಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ ಶರಣ ಸಾಹಿತ್ಯ ಪರಿಷತ್ತಿನ ಮಾಜಿ ಅಧ್ಯಕ್ಷ ಅ. ಓಂ ಪಾಟೀಲ್, 12ನೇ ಶತಮಾನದ ಶರಣರ ಚಿಂತನೆಗಳು ಇಂದಿನ ಸಮಾಜಕ್ಕೆ ಅತ್ಯವಶ್ಯವಾಗಿದ್ದು, ಅಂಬೇಡ್ಕರ್ ಅವರ ವಿಚಾರಧಾರೆಗಳನ್ನು ಯುವ ಪೀಳಿಗೆ ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದರು. ಕದಳಿ ಮಹಿಳಾ ವೇದಿಕೆಯ ಮಾಜಿ ಅಧ್ಯಕ್ಷೆ ಶ್ರೀಮತಿ ಪ್ರೇಮಾ ಗುಳಗೌಡ ಅವರು ಕೂಡ ಕಾರ್ಯಕ್ರಮದಲ್ಲಿ ಮಾತನಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಕೆ.ಎ. ಬಳಗೇರ, ಶರಣರ ಚಿಂತನೆಗಳು ಆಧುನಿಕ ಸಮಾಜ ನಿರ್ಮಾಣಕ್ಕೆ ಬುನಾದಿಯಾಗಿದ್ದು, ಅಕ್ಕಮಹಾದೇವಿಯ ನಿಲುವು ಮತ್ತು ಅಂಬೇಡ್ಕರ್ ಅವರ ವೈಚಾರಿಕತೆಗಳು ಸಮಾನತೆಯ ಸಮಾಜಕ್ಕೆ ಪೂರಕವಾಗಿವೆ ಎಂದರು.

ತಾಲೂಕ ಕದಳಿ ಮಹಿಳಾ ವೇದಿಕೆಯ ಅಧ್ಯಕ್ಷೆ ಸುಲೋಚನಾ ಐಹೊಳೆ ಸ್ವಾಗತಿಸಿದರು. ಶ್ರೀ ಬಣಕಾರ್ ವಚನ ಗಾಯನ ನೆರವೇರಿಸಿದರು. ತಾಲೂಕ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಪ್ರಕಾಶ್ ಅಸುಂಡಿ ಶರಣು ಸಮರ್ಪಣೆ ನೆರವೇರಿಸಿದರು. ಕಾರ್ಯಕ್ರಮವನ್ನು ಪ್ರೊ. ಎಸ್.ಯು. ಸಜ್ಜನಶೆಟ್ಟರ್ ನಿರೂಪಿಸಿದರು.

ಈ ಸಂದರ್ಭದಲ್ಲಿ ಶ್ರೀಮತಿ ಶಾಂತಾ ಮುಂದಿನಮನಿ, ಶ್ರೀಮತಿ ಮಂಜುಳಾ ಅಕ್ಕಿ, ಶ್ರೀ ನಿಂಬನಗೌಡರ, ಬೂದಪ್ಪ ಅಂಗಡಿ, ಅಂದಾನಪ್ಪ ವಿಭೂತಿ, ಶ್ರೀ ಎಸ್. ಎಸ್. ಶಿವನಗೌಡರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka